ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 193 Pages : 4 Price : 3.00 Saturday september 7 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಶುಭಾಶಯಗಳು



ವಿಜಯಸಾಕ್ಷಿಯ ಸಮಸ್ತ ಓದುಗರಿಗೆ, ಜಾಹೀರಾತುದಾರರಿಗೆ, ಏಜೆಂಟರಿಗೆ, ಪತ್ರಿಕಾ ವಿತರಕರಿಗೆ ಗೌರಿ-ಗಣೇಶ ಹಬ್ಬದ ಶುಭಾಶಯಗಳು.

## ಬಿಡುವು

ಗಣೇಶ ಹಬ್ಬದ ಪ್ರಯುಕ್ತ ಕಚೇರಿಗೆ ಇಂದು ಬಿಡುವು ಇರುವುದರಿಂದ ನಾಳೆಯ ಸಂಚಿಕೆ ಪ್ರಕಟವಾಗುವುದಿಲ್ಲ. ಓದುಗರ ಸಹಕಾರ ಸದಾ ಇರಲಿ.

–ಸಂಪಾದಕರು

### ವಿಕೇಂದ್ರೀಕರಣ ವ್ಯವಸ್ಥೆ ಕುರಿತ ಕಾರ್ಯಾಗಾರದಲ್ಲಿ ಸಚಿವ ಎಚ್.ಕೆ. ಪಾಟೀಲ ಆಶಯ

# ಗ್ರಾಮ ಸ್ವರಾಜ್ ಕನಸು ನನಸಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹಳ್ಳಿಗಳು ಅಭಿವೃದ್ಧಿ ಹೊಂದಿದಾಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ. ಅದಕ್ಕಾಗಿ ವಿಕೇಂದ್ರೀಕರಣ ವ್ಯವಸ್ಥೆ ಜಾರಿಗೊಳಿಸುವ ಮೂಲಕ ಗಾಂಧೀಜಿಯವರ ಗ್ರಾಮ ಸ್ವರಾಜ್ ಕನಸು ನನಸಾಗಿಸೋಣ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶುಕ್ರವಾರ ವಿಕೇಂದ್ರೀಕರಣ ವ್ಯವಸ್ಥೆಯಲ್ಲಿ ಯೋಜನೆಗಳ ತಯಾರಿಕೆ ಪ್ರಕ್ರಿಯೆಯನ್ನು ಬಲವರ್ಧನೆಗೊಳಿಸುವ ಕಾರ್ಯಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇದು ಹೊಸ ಅನುಭವ, ಆಲೋಚನೆ ಮೂಡಿಸಲು ಏರ್ಪಡಿಸಿದ ಕಾರ್ಯಾಗಾರವಾಗಿದೆ. ಎಲ್ಲಾ ಚುನಾಯಿತ ಪ್ರತಿನಿಧಿಗಳು ಆಸಕ್ತಿ ಮತ್ತು ಶ್ರದ್ಧೆಯಿಂದ ತಮ್ಮನ್ನು ಗ್ರಾಮದ ಅಭಿವೃದ್ಧಿ ಕೆಲಸದಲ್ಲಿ ತೊಡಗಿಸಿಕೊಂಡು ಪ್ರತಿಜ್ಞಾಬದ್ಧರಾಗಿ ಕಾನೂನಿನಲ್ಲಿ ಕಲ್ಪಿಸಿರುವ ಅಧಿಕಾರವನ್ನು ಬಳಸಿ ಒಳ್ಳೆಯ ಕೆಲಸದ ಮೂಲಕ ಜನ ಕಲ್ಯಾಣ ಕಾರ್ಯಮಾಡಬೇಕು ಎಂದರು.

ಸಾಮಾನ್ಯ ಜನರಿಗೆ ಗ್ರಾಮ ಪಂಚಾಯಿತಿ ಮೇಲೆ ವಿಶ್ವಾಸ ಬರುವ ಹಾಗೆ ಜನರ ಬೇಕು-ಬೇಡಗಳನ್ನು ಸಂಗ್ರಹಿಸಿ ಅದನ್ನು ಅನುಷ್ಠಾನಗೊಳಿಸುವ ಕೆಲಸವಾಗಬೇಕು. ಗ್ರಾ.ಪಂ ಚುನಾಯಿತ ಜನಪ್ರತಿನಿಧಿಗಳಿಗೆ ಕಾನೂನು ಸಾಕಷ್ಟು ಅಧಿಕಾರವನ್ನು ನೀಡಿದೆ. ಅದನ್ನು ಸಮರ್ಪಕವಾಗಿ ಉಪಯೋಗಿಸಿಕೊಳ್ಳಲು ಜಾಗೃತಗೊಳಿಸುವ ವೇದಿಕೆ ಇದಾಗಬೇಕು ಎಂದು ಹೇಳಿದರು.

ಕೇರಳ ರಾಜ್ಯ ಸರ್ಕಾರದ ನಿವೃತ್ತ ಮುಖ್ಯಕಾರ್ಯದರ್ಶಿ ಎಸ್.ಎಮ್. ವಿಜಯಾನಂದ



ಮಾತನಾಡಿ, ಕರ್ನಾಟಕವು ಅತ್ಯಂತ ಗಟ್ಟಿಯಾದ ಪಂಚಾಯತ ವ್ಯವಸ್ಥೆಯನ್ನು ಹೊಂದಿದೆ. ಪಂಚಾಯಿತಿಯ ಪ್ರತಿಯೊಬ್ಬ ಜನಪ್ರತಿಯೂ ಸಂವಿಧಾನದ 73 ಮತ್ತು ಪಂಚಾಯಿತಿಗೆ ಸಂಬಂಧಿಸಿದ ಅರ್ಟಿಕಲ್ ಹಾಗೂ ಸಂವಿಧಾನ ಪೀಠಿಕೆಯನ್ನು ಓದಿ ಅರ್ಥೈಸಿಕೊಳ್ಳಬೇಕು. ತಮ್ಮ ಗ್ರಾಮದ ಸಂಪನ್ಮೂಲ ಶಕ್ತಿ ಮತ್ತು ದೌರ್ಬಲ್ಯಗಳನ್ನು ಗುರುತಿಸಿಕೊಳ್ಳಬೇಕು. ರಾಜ್ಯ, ಕೇಂದ್ರ ಸರ್ಕಾರಗಳಿಂದ ಬರುವ ಅನುದಾನವನ್ನು ಗಮನದಲ್ಲಿಟ್ಟುಕೊಂಡು ಯೋಜನೆಯನ್ನು ಸಿದ್ಧಪಡಿಸಿಕೊಳ್ಳಬೇಕು ಎಂದರು.

ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಎಸ್. ಪಾಟೀಲ ಮಾತನಾಡಿ, ವಾಸ್ತವವಾಗಿ ಪ್ರತಿಯೊಂದು ಗ್ರಾಮದಲ್ಲಿ ತನ್ನದೇ ಆದ ನ್ಯೂನತೆಗಳಿವೆ. ಅದನ್ನು ಪರಿಹರಿಸಬೇಕಾದರೆ ಪ್ರತಿಯೊಬ್ಬರೂ ಸ್ವಯಂ ಸೇವೆಯಿಂದ ತಮ್ಮ ಗ್ರಾಮವನ್ನು ಅಭಿವೃದ್ಧಿ ಮಾಡುವುದಾಗಿ ಪಣತೊಡಬೇಕು. ಅಂದಾಗ ಮಾತ್ರ ಇಂತಹ ಕಾರ್ಯಾಗಾರ ಸಾರ್ಥಕವಾಗುತ್ತದೆ ಎಂದರು.

> ಸರ್ಕಾರ ನೀಡಿದ ಪಂಚ ಗ್ಯಾರಂಟಿ ಯೋಜನೆಗಳು ಬಡತನವನ್ನು ನಿರ್ಮೂಲನೆಗೊಳಿಸುವ ಕ್ರಾಂತಿಕಾರಿಕ ಕಾರ್ಯಕ್ರಮವಾಗಿದೆ. ಪ್ರತಿಯೊಬ್ಬರ ಬಡಜನರ ಮನೆಗೂ ಮಾಸಿಕ 5 ಸಾವಿರ ರೂ ದೊರೆ-ಯುತ್ತಿದೆ. ಈ ಮೂಲಕ ಬಡತನವನ್ನು ಬೇರು ಸಮೇತ ಕಿತ್ತೊಗೆಯುವ ಕಾರ್ಯ ಸರ್ಕಾರದಿಂದ ಯಶ್ವಸಿಯಾಗಿ ಸಾಗಿದೆ.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

ಮಾಜಿ ಶಾಸಕ ಡಿ.ಆರ್. ಪಾಟೀಲ್ ಪ್ರಾಸ್ತಾವಿಕ ಮಾತನಾಡಿ, ಗ್ರಾಮದಲ್ಲಿನ ಜನರ ಪಾಲ್ಗೊಳ್ಳುವಿಕೆಯಿಂದ ಅವರ ಆಲೋಚನೆ ತಕ್ಕಂತೆ ಅವರ ಸಮಸ್ಯೆಗಳನ್ನು ಪರಿಹರಿಸುವ, ಕಾನೂನಿನ ಪ್ರಕಾರ ಜನರು ಅಪೇಕ್ಷಿಸುವ ಯೋಜನೆಗಳು ಒಮ್ಮತದಿಂದ ಅನುಷ್ಠಾನಕ್ಕೆ ಬರಬೇಕು ಎಂದರು.

> ಈ ಕಾರ್ಯಾಗಾರವನ್ನು ಸೂಕ್ಷ್ಮವಾಗಿ ಗಮನಿಸಿದರೆ, ಮನುಷ್ಯನಿಗೆ ಬೇಕಾದ ಅತಿ ಅವಶ್ಯಕ ಮೂಲಭೂತ ಸೌಲಭ್ಯಗಳನ್ನು ಹೊಂದಬೇಕು ಎನ್ನುವ ಉದ್ದೇಶವನ್ನು ಒಳಗೊಂಡಿದೆ. ಹಾಗಾಗಿ ದೇಶ ಅಭಿವೃದ್ಧಿ ಹೊಂದಬೇಕಾದರೆ ಮೊದಲು ನಮ್ಮ ಗ್ರಾಮ ಅಭಿವೃದ್ಧಿ ಹೊಂದಬೇಕು. ದ್ವೇಷ, ಅಸೂಯೆ ಎಲ್ಲವನ್ನು ಮರೆತು ರಾಜಕೀಯ ಮಾಡದೇ ಅಭಿವೃದ್ಧಿ ಕಡೆಗೆ ಗಮನಹರಿಸಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ನುಡಿದರು.

ಜನಪ್ರತಿನಿಧಿಗಳು ಸರಿಯಾದ ಸಮಯಕ್ಕೆ ಕ್ರಿಯಾಯೋಜನೆಯನ್ನು ತಯಾರಿಸಿ ತಾಲೂಕು ಮತ್ತು ಜಿಲ್ಲಾ ಮಟ್ಟಕ್ಕೆ ಕಳಿಸಿದಾಗ ಬಜೆಟ್ ಮಂಡನೆ ಮಾಡುವ ಸಂದರ್ಭದಲ್ಲಿ ಸರ್ಕಾರದಿಂದ ಅನುದಾನ ಒದಗಿ ಬರುತ್ತದೆ. ಅದನ್ನು ಉಪಯೋಗಿಸಿಕೊಂಡು ಗಾಂಧೀಜಿ ಅವರ ಕನಸನ್ನು ನನಸು ಮಾಡಬೇಕು ಎಂದು ಹೇಳಿದರು.

ಕಾರ್ಯಾಗಾರದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಗ್ಯಾರಂಟಿ ಸಮಿತಿ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ. ಸಿಇಒ ಭರತ್ ಎಸ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ವಿವಿಧ ಗ್ರಾಮ ಪಂಚಾಯಿತಿ ಪ್ರತಿನಿಧಿಗಳು, ಪಿಡಿಓಗಳು ಹಾಜರಿದ್ದರು.

ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಜೆ.ಸಿ. ಪ್ರಶಾಂತ ಸ್ವಾಗತಿಸಿದರು. ಜಿ.ಪಂ ಮುಖ್ಯ ಯೋಜನಾಧಿಕಾರಿ ನಿರ್ಮಲಾ ವಂದಿಸಿದರು.

### ಹೆಸರು ಖರೀದಿ ಕೇಂದ್ರಕ್ಕೆ ಚಾಲನೆ ನೀಡಿದ ಸಚಿವ ಎಚ್.ಕೆ. ಪಾಟೀಲ

# ರೈತನಿಗೆ ಅನಾನುಕೂಲವಾಗಬಾರದು

■ ವಿಜಯಸಾಕ್ಷಿ ಸುದ್ದಿ, ಗದಗ



ಮಹದಾಯಿ ಯೋಜನೆ ಜಾರಿಗೆ ಕೇಂದ್ರ ಸರಕಾರ ವನ್ಯಜೀವಿ ಮಂಡಳಿ ಅಡೆ-ತಡೆ ಉಂಟುಮಾಡುತ್ತಿದೆ. ಈ ಕುರಿತು ರಾಜ್ಯ ಸರಕಾರ ಗಂಭೀರವಾಗಿ ಚಿಂತನೆ ಮಾಡಿದ್ದು, ಸರ್ವಪಕ್ಷಗಳ ಸಭೆ ಕರೆದು, ಪ್ರಧಾನಿ ಬಳಿ ಸರ್ವ ಪಕ್ಷನಿಯೋಗ ತೆಗೆದುಕೊಂಡು ಹೋಗಲು ಸಿಎಂ ಸಿದ್ದರಾಮಯ್ಯ ಅವರು ತೀರ್ಮಾನಿಸಿದ್ದಾರೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಬೆಂಬಲ ಬೆಲೆ ಯೋಜನೆಯಡಿ ಹೆಸರು ಖರೀದಿ ಕೇಂದ್ರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮಹದಾಯಿ ವಿಚಾರವಾಗಿ ಕಾನೂನು ತಜ್ಞರನ್ನು ಸಂಪರ್ಕಿಸಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಲು ಚಿಂತನೆ ನಡೆಸಲಾಗುತ್ತಿದೆ ಎಂದರು.

ರಾಜ್ಯದ ಅಭಿವೃದ್ಧಿ ಕಡೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಜೈವಿಕ ತಂತ್ರಜ್ಞಾನದ ಸಲುವಾಗಿ ವಿಶೇಷ ನೀತಿಯನ್ನು ಜಾರಿಗೆ ತಂದಿದ್ದು, ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಆರಂಭಿಸಿದ್ದೇವೆ ಎಂದರು.

ಕಾಂಗ್ರೆಸ್ ಪಕ್ಷದಲ್ಲಿಯೇ ಸಿಎಂ ಕುರ್ಚಿಗಾಗಿ ದೋಣಿ ಕೊರೆಯುವ ಕೆಲಸವಾಗುತ್ತಿದೆ. ಮುಂದಿನ ಎರಡು ತಿಂಗಳೊಳಗಾಗಿ ರಾಜ್ಯಪಾಲರ ವರದಿ ಬರುತ್ತದೆ ಎಂದರು. ಸಿಎಂ ಸಿದ್ರಾಮಯ್ಯ ಅವರು ಅಧಿಕಾರ ಕಳೆದುಕೊಳ್ಳುತ್ತಾರೆ ಎಂಬ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಸಚಿವರು, ಬಸವರಾಜ ಬೊಮ್ಮಾಯಿ ಅವರು ಸ್ನೇಹಿತರಾಗಿ ಆ ರೀತಿ ಎಚ್ಚರಿಕೆ ಕೊಟ್ಟಿದ್ದರೆ, ಅವುಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇವೆ ಎಂದರು.

ಬೆಂಬಲ ಯೋಜನೆಯಡಿ ಖರೀದಿಸುವ ಹೆಸರಿನ ಹಣ ನೇರವಾಗಿ ರೈತರಿಗೆ ಮುಟ್ಟಬೇಕು. ಈ ಯೋಜನೆಯಲ್ಲಿ ಯಾವ ಕಾರಣಕ್ಕೂ ಮಧ್ಯವರ್ತಿಗಳು ಲಾಭ ಪಡೆಯುವಂತಾಗಬಾರದು. ರೈತನಿಗೆ ಅನಾನುಕೂವಾಗಬಾರದು. ರೈತರ ಹಿತವನ್ನು ಗಮನದಲ್ಲಿಟ್ಟುಕೊಂಡು ಕೆಲಸ ಮಾಡಿ ಎಂದು ಈಗಾಗಲೇ ಮಾರ್ಕೆಟಿಂಗ್ ಫೆಡರೇಶನ್‌ನವರಿಗೆ ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು.

> ನಗರದ ದಿ. ಕಾಟನದ ಸೇಲ್ ಸೊಸೈಟಿ ಕೇಂದ್ರದಲ್ಲಿ ಹೆಸರು ಖರೀದಿ ಕೇಂದ್ರವನ್ನು ಆರಂಭ ಮಾಡಿದ್ದೇವೆ. ಪ್ರತಿ ಕ್ವಿಂಟಾಲ್‌ಗೆ 8,682 ರೂ. ಬೆಂಬಲ ಬೆಲೆ ಯೋಜನೆಯಡಿ ಸಮಯಕ್ಕೆ ಸರಿಯಾಗಿ ಖರೀದಿ ಕೇಂದ್ರಗಳನ್ನು ಆರಂಭ ಮಾಡಲಾಗಿದೆ. ಕೆಲವರು 15 ದಿನಗಳ ಮುಂಚೆ ಆರಂಭಗೊಳ್ಳಬೇಕಿತ್ತು ಎಂಬ ಅನಿಸಿಕೆ ವ್ಯಕ್ತಪಡಿಸಿದ್ದರು. ಆದರೆ, ತಾಂತ್ರಿಕ ತೊಂದರೆಯಿಂದಾಗಿ ಖರೀದಿ ಕೇಂದ್ರಗಳನ್ನು ಈಗ ಆರಂಭಿಸಿದ್ದೇವೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

### ಪತ್ರಿಕಾಗೋಷ್ಠಿಯಲ್ಲಿ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಅನಿಲ ಅಬ್ಬಿಗೇರಿ

# ಪರಿಸರ ಸ್ನೇಹಿ ಗಣಪನ ಪ್ರತಿಷ್ಠಾಪನೆಗೆ ಆದ್ಯತೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿ ವರ್ಷದಂತೆ ಈ ಬಾರಿಯೂ ಸಾರ್ವಜನಿಕ ಗಣೇಶೋತ್ಸವ ಮಹಾಮಂಡಳಿ ಅದ್ಧೂರಿ ಮತ್ತು ಅರ್ಥಪೂರ್ಣ ಗಜಾನನ ಉತ್ಸವ ಆಚರಣೆಗೆ ಬದ್ಧವಾಗಿದೆ. 9ನೇ ದಿನಕ್ಕೆ ವಿಸರ್ಜನೆ ಮಾಡುವ ನಿರ್ಧಾರಕ್ಕೆ ಬದ್ಧವಾಗಿದೆ. ಅಧಿಕಾರಿಗಳು, ಪೊಲೀಸರು ಸಹ ಸಹಮತ ವ್ಯಕ್ತಪಡಿಸಿದ್ದಾರೆ ಎಂದು ಗದಗ-ಬೆಟಗೇರಿ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಅನಿಲ ಅಬ್ಬಿಗೇರಿ ಹೇಳಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರ್ವಜನಿಕ ಗಣೇಶೋತ್ಸವ ಮಹಾಮಂಡಳಿ ಈ ಬಾರಿಯೂ ಪರಿಸರ ಸ್ನೇಹಿ ಗಣಪನ ಪ್ರತಿಷ್ಠಾಪನೆಗೆ ಪ್ರಾತಿನಿಧ್ಯ ನೀಡಿದೆ. ನಿಯಮ ಮೀರುವವರಿಗೆ ಮತ್ತೊಮ್ಮೆ ವಿನಂತಿಸಿಕೊಂಡು ಪರಿಸರ ಸ್ನೇಹಿ ಗಣೇಶನನ್ನು ಪ್ರತಿಷ್ಠಾಪಿಸಲು ವಿನಂತಿಸಲಾಗಿದೆ ಎಂದರು.

ಸದ್ಯ ಅವಳಿ ನಗರದಲ್ಲಿ 180ಕ್ಕೂ ಹೆಚ್ಚು ಸಾರ್ವಜನಿಕ ಗಣೇಶೋತ್ಸವ ಮಂಡಳಿಗಳಿವೆ. ಆ ಎಲ್ಲ ಮಂಡಳಿಗಳು ಮಹಾಮಂಡಳಿ ಸದಸ್ಯತ್ವ ಪಡೆದುಕೊಂಡು ಮಹಾಮಂಡಳಿಗೆ ಬಲ ತುಂಬುವ




ಜೊತೆಗೆ ಒಗ್ಗಟ್ಟಿನಿಂದ ಗಣೇಶೋತ್ಸವ ಆಚರಣೆಗೆ ಸಹಕಾರ ನೀಡಬೇಕು. ಈ ಬಾರಿಯೂ ಉತ್ತಮ ಪ್ರದರ್ಶನ ನೀಡುವ ಮಂಡಳಿಗಳಿಗೆ ಪುರಸ್ಕಾರ ನೀಡಲಾಗುತ್ತದೆ ಎಂದು ತಿಳಿಸಿದರು.

ಮಹಾಮಂಡಳಿ ಅಧ್ಯಕ್ಷ ರಾಜಣ್ಣ ಮಲ್ಲಾಡದ ಅವರು ತರುಣ ವ್ಯಾಪಾರಸ್ಥರ ಸಂಘದ ನೆರವಿನಿಂದ 9ನೇ ದಿನ ನಡೆಯುವ ವಿಸರ್ಜನೆ ಕಾರ್ಯಕ್ರಮದಲ್ಲಿ ಭಾಗಿಯಾಗುವ ಎಲ್ಲರಿಗೂ ಪ್ರಸಾದ ವ್ಯವಸ್ಥೆ ಮಾಡಿದ್ದಾರೆ. ಗಣೇಶ ವಿಸರ್ಜನೆ ಮೆರವಣಿಗೆ ವೀಕ್ಷಿಸಲು ಆಗಮಿಸುವ ಜನ ರಾತ್ರಿಯಿಡೀ ಕಾರ್ಯಕ್ರಮ ನೋಡಿ ಸಂಭ್ರಮಿಸಲಿ ಎನ್ನುವ ಕಾರಣಕ್ಕೆ ಊಟದ ವ್ಯವಸ್ಥೆ ಮಾಡಿದ್ದಾರೆ ಎಂದರು.

ಮಹಾಮಂಡಳಿ ಅಧ್ಯಕ್ಷ ರಾಜಣ್ಣ ಮಲ್ಲಾಡದ ಮಾತನಾಡಿ, ಶಾಲೆ-ಕಾಲೇಜುಗಳಲ್ಲಿಯೂ ಗಣೇಶೋತ್ಸವ ಆಚರಣೆ ಮಾಡಲು ಅನುಕೂಲ ಆಗುವಂತೆ ಈಗಾಗಲೇ ನೋಂದಣಿ ಮಾಡಿಕೊಂಡ 25 ಶಾಲೆ-ಕಾಲೇಜುಗಳುಗಳಿಗೆ ಉಚಿತವಾಗಿ ಗಣೇಶ ಮೂರ್ತಿಗಳನ್ನು ನೀಡಲಾಗುತ್ತಿದೆ. ಶನಿವಾರ ಬೆಳಿಗ್ಗೆ ಪಂಚಾಚಾರ್ಯ ಮಾಂಗಲ್ಯ ಮಂದಿರದಿಂದ ಗಣೇಶ ಮೂರ್ತಿಗಳನ್ನು ವಿತರಣೆ ಮಾಡಲಾಗುವುದು ಎಂದರು.

> ಶ್ರೀರಾಮ ಸೇನೆ ರಾಜ್ಯ ಕಾರ್ಯದರ್ಶಿ ರಾಜು ಖಾನಪ್ಪನವರ ಮಾತನಾಡಿ, ಹಿಂದೂ ಸಂಪ್ರದಾಯದಲ್ಲಿ ಮಣ್ಣು, ಕಲ್ಲು ಪೂಜಿಸಲಾಗುತ್ತದೆ. ಸಿಮೆಂಟ್‌ನಿಂದ ತಯಾರಿಸಿದ ಮೂರ್ತಿಗಳನ್ನು ಪೂಜಿಸುವುದು ನಮ್ಮ ಸಂಪ್ರದಾಯವಲ್ಲ. ಹೀಗಾಗಿ ಪ್ರತಿಯೊಬ್ಬರೂ ಮಣ್ಣಿನ ಮೂರ್ತಿಗಳನ್ನೇ ಪ್ರತಿಷ್ಠಾಪಿಸಿ ಪೂಜೆ ಮಾಡಬೇಕು. ಈ ಹಿಂದೆ ಬಾಲಗಂಗಾಧರ ತಿಲಕರು ಸ್ವಾತಂತ್ರ್ಯಕ್ಕಾಗಿ ಸಾರ್ವಜನಿಕ ಗಣೇಶೋತ್ಸವ ಆಚರಣೆಗೆ ತಂದರು. ಈಗ ಧರ್ಮದ ಉಳಿವಿಗಾಗಿ ಹಬ್ಬವನ್ನು ಆಚರಣೆ ಮಾಡಬೇಕಾಗಿದೆ ಎಂದರು.

ಈ ಸಂದರ್ಭದಲ್ಲಿ ಕಿಶನ್ ಮೇರವಾಡೆ, ಪ್ರಕಾಶ ಅಂಗಡಿ, ರಾಜು ಮುಧೋಳ, ಅಜ್ಜಣ್ಣ ಮಲ್ಲಾಡದ, ಕಿರಣ ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

# ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆ. 7-9-2024 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 21, 22, 23 ಮೇಹರವಾಡೆ ಲೈನ್, ಚೆನ್ನಪ್ಪ ಹೊಸ ಲೈನ್, ಹಳೇ ಲೈನ್, ರಾಮದಾಸ, ಭೂಮಾ, ಗುಳಗುಂದಿ, ಸ್ಮಶಾನ ಗಟ್ಟಿ ಲೈನ್, ಹಕ್ಕಿ ಪ್ಲಾಟ್, ಮುನವಳ್ಳಿ ಪ್ಲಾಟ್, ಕಮತರ ಪ್ಲಾಟ್ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 22 ಈಶ್ವರಗುಡಿ, ಗಿರಣಿ ಲೈನ್, ಶಿವಪ್ಪರವರ ಲೈನ್ 1 ರಿಂದ 5 ವರೆಗಿನ ಲೈನ್, ದಖನಿಯವರ ಲೈನ್, ದೊಡ್ಡ ಮಸೂತಿ ಭಾಗ.

ವಾರ್ಡ್ ನಂ. 27, 28 ಸ್ಟೇಡಿಯಂ ಭಾಗ, ನಂದೀಶ್ವರ ಮಠ, ರೊಟ್ಟಿ ಲೇಔಟ್, ಹೊಸಮನಿಯವರ ಲೈನ್, ತಂಬ್ರಹಳ್ಳಿ ಮಠ, ಕೊಪ್ಪದವರ ಲೈನ್, ಕೆ ಎಚ್ ಪಾಟೀಲರ ಲೈನ್, ನಾಗರಕಟ್ಟಿ, ಮಲ್ಲಾಡದವರ ಲೈನ್, ಎಸ್ ಎಸ್ ಪಾಟೀಲರ ಲೈನ್ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 3 ಬಣ್ಣದ ನಗರ, ಕುಂಬಾರ ಓಣಿ, ಲಕ್ಕುಂಡಿ ದವಾಖಾನೆ, ಮೆಹರವಾಡೆ, ಬ್ಯಾಳಿಯವರ ಲೈನ್, ಕುಂಬಾರ ಓಣಿ, ಅಯ್ಯಪ್ಪಜ್ಜನ ಗದ್ದುಗೆ, ಹುಯಿಲಗೋಳ ರಸ್ತೆ ಕೆಲವು ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಗದಗ ಜಿಲ್ಲೆಯ ಲೋಕೋಪಯೋಗಿ ತಾಲೂಕಾಧಿಕಾರಿಗಳಿಗೆ ಶುಕ್ರವಾರ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ವಾಹನಗಳ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ರೋಣ ಶಾಸಕರಾದ ಜಿ.ಎಸ್ ಪಾಟೀಲ, ಗದಗ ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಬಿ.ಬಿ ಅಸೂಟಿ, ಅಶೋಕ ಮಂದಾಲಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಹೆಸರು ಕಾಳು ಖರೀದಿ ಕೇಂದ್ರ ಉದ್ಘಾಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರಿಂದ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ, ಗದಗ ಇವರ ಸಹಯೋಗದಲ್ಲಿ ದಿ. ಗದಗ ಕೋ ಆಪ್ ಕಾಟನ್ ಸೇಲ್ ಸೊಸೈಟಿಯಲ್ಲಿ ಎಫ್‌ಎಕ್ಯೂ ಗುಣಮಟ್ಟದ ಹೆಸರು ಕಾಳು ಖರೀದಿ ಕೇಂದ್ರವನ್ನು ಶುಕ್ರವಾರ ಉದ್ಘಾಟಿಸಲಾಯಿತು. ಹೆಸರುಕಾಳು ಖರೀದಿ ಕೇಂದ್ರದಿಂದ ಹೆಚ್ಚಿನ ಪ್ರಯೋಜನ ದೊರಕಿಸಿಕೊಳ್ಳುವಂತೆ ಹೆಸರು ಬೆಳೆಗಾರರಿಗೆ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಡಿ.ಆರ್.ಪಾಟೀಲ, ಜಿಲ್ಲಾ ಗ್ಯಾರಂಟಿ ಸಮಿತಿಯ ಅಧ್ಯಕ್ಷ ಬಿ.ಬಿ.ಅಸೂಟಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಮ್.ಬಿ.ಸಂಕದ, ರೈತರು ಹಾಜರಿದ್ದರು.

**49ನೇ ವರ್ಷದ ಬೆಟಗೇರಿ ಶ್ರೀ ಸಾರ್ವಜನಿಕ ಗಜಾನನೋತ್ಸವ**

# ಆಕರ್ಷಕ ದೃಶ್ಯರೂಪಕ ಪ್ರದರ್ಶನ ಇಂದಿನಿಂದ



■ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದ ಬೆಟಗೇರಿ ಪಾಲಾ-ಬಾದಾಮಿ ರಸ್ತೆಯಲ್ಲಿರುವ ಸಾರ್ವಜನಿಕ ಶ್ರೀ ಗಜಾನೋತ್ಸವ ಮಂಡಳಿಯ ಆಶ್ರಯದಲ್ಲಿ ಸುದೀರ್ಘ 49ನೇ ವರ್ಷದ ಗಣೇಶೋತ್ಸವವನ್ನು ಆಚರಿಸಲಾಗುತ್ತಿದೆ. ಅಪಾರ ಭಕ್ತರನ್ನು ಹೊಂದಿರುವ ಬೆಟಗೇರಿ ಶ್ರೀ ಸಾರ್ವಜನಿಕ ಗಜಾನನ ಗಣಪತಿ ವೀಕ್ಷಣೆಗೆ ಸುತ್ತ ಮುತ್ತಲಿನ ಪ್ರದೇಶದಿಂದ, ಬೇರೆ ರಾಜ್ಯಗಳಿಂದಲೂ ಕೂಡ ಭಕ್ತಜನರು ಆಗಮಿಸಿ, ಗಣೇಶನ ದರ್ಶನ ಪಡೆದು, ತಮ್ಮ ಇಷ್ಟಾರ್ಥಗಳನ್ನು ಪೂರೈಸಿಕೊಳ್ಳುತ್ತಾರೆ.

ಪ್ರತಿ ವರ್ಷವೂ, ಉತ್ಸವದ ಸಂದರ್ಭದಲ್ಲಿ ಕೇವಲ ಪೌರಾಣಿಕ ಹಾಗೂ ಐತಿಹಾಸಿಕದ ಕಥಾ ಪ್ರಸಂಗಗಳ ದೃಶ್ಯರೂಪಕಗಳನ್ನು ಅಳವಡಿಸುವ ಮೂಲಕ ನಮ್ಮ ಭಾರತೀಯ ಸಂಸ್ಕೃತಿಯನ್ನು ತೋರಿಸುವ ಪ್ರಯತ್ನವನ್ನು ಮಾಡಲಾಗುತ್ತಿದೆ. ಜನ ಜಾಗೃತಿಯ ಸಾಮಾಜಿಕ ಸಂದೇಶವನ್ನು ಸಾರುವ ದೃಶ್ಯಾವಳಿಗನ್ನು ಅಳವಡಿಸುವ ಮೂಲಕ, ಕಳೆದ 49 ವರ್ಷಗಳಿಂದ ಸಂಘವು ಹತ್ತು ಹಲವು ಪ್ರತಿಷ್ಠಿತ ಪ್ರಶಸ್ತಿಗಳಿಗೆ ಪಾತ್ರವಾಗಿದೆ.

ಇಲ್ಲಿ ಪ್ರತಿಷ್ಠಾಪಿಸುವ ಸುಂದರವಾದ ಆಸ್ಥಾನಾರೂಢ ಮಹಾಗಣಪತಿಯ ವಿಗ್ರಹವು ಸಕಲ ಭಕ್ತಾದಿಗಳ ಮೆಚ್ಚುಗೆಗೆ ಪಾತ್ರವಾಗಿರುವುದಷ್ಟೇ ಅಲ್ಲದೆ, ಅಪ್ಪಟ ಮಣ್ಣಿನಿಂದಲೇ ತಯಾರಿಸಲ್ಪಟ್ಟು, ಪರಿಸರ ಸ್ನೇಹಿಯಾಗಿರುವುದು ವಿಶಿಷ್ಟ. ಗಣಪತಿ ವಿಗ್ರಹವನ್ನು ಶಿರಸಿಯ ಕಲಾವಿದರಿಂದ ತಯಾರಿಸಲ್ಪಡುತ್ತಿದೆ. ಪ್ರಸಕ್ತ ವರ್ಷದ ಗಣಪತಿ ವಿಗ್ರಹವು 6 ಅಡಿ ಎತ್ತರವಿದ್ದು, ಮೂರ್ತಿಯನ್ನು ಶಿರಸಿಯ ಸತೀಶ ಶ್ರೀನಿವಾಸ ಗುಡಿಗಾರ ಎಂಬುವವರು ನಿರ್ಮಿಸಿದ್ದಾರೆ.

ಪ್ರಸಕ್ತ ವರ್ಷದ ಗಜಾನನೋತ್ಸವದಲ್ಲಿ ಬೆಟಗೇರಿಯ ಮಹಾ ಮಾಂತ್ರಿಕ ಯಾತಾಳಿ ಚೆನ್ನಬಸಪ್ಪಜ್ಜನ ಪವಾಡ ಪ್ರಸಂಗದ ಕುರಿತು ದೃಶ್ಯಾವಳಿಯ ಕಥಾರೂಪಕವನ್ನು ಸೆ.7ರಿಂದ ಸೆ.16ರವರೆಗೆ ಪ್ರತಿದಿನ ಸಾಯಂಕಾಲ 6.30ರಿಂದ ರಾತ್ರಿ 11ರವರೆಗೆ ಪ್ರದರ್ಶಿಸಲಾಗುವುದು.

ಸೆ.7ರಂದು ಗಣಪತಿಯ ಪ್ರತಿಷ್ಠಾಪನೆಯನ್ನು ವಿಜೃಂಭಣೆಯಿಂದ ಮಾಡಲಾಗುವುದು ಮತ್ತು ಸಾಯಂಕಾಲ 6:30 ಗಂಟೆಗೆ ಮಹಾ ಮಂಗಳಾರತಿ ನೆರವೇರುವುದು. 11ನೇ ದಿನ, ಸೆ.17ರಂದು, ಸಂಜೆ ಪ್ರಸಾದಗಳ ಲಿಲಾವು ಮತ್ತು ಮಂಗಲ ವಾದ್ಯವೃಂದ ಮೇಳೊಂದಿಗೆ ಶ್ರೀ ಗಣೇಶ ವಿಸರ್ಜನೆಯ ಕಾರ್ಯಕ್ರಮ ನೆರವೇರುವುದು. ಈ ಎಲ್ಲ ಕಾರ್ಯಕ್ರಮಗಳಲ್ಲಿ ಭಕ್ತ ಜನರು ಭಾಗವಹಿಸುವ ಮೂಲಕ ಗಣೇಶನ ಕೃಪೆಗೆ ಪಾತ್ರರಾಗಬೇಕಾಗಿ ಮಂಡಳಿಯ ಅಧ್ಯಕ್ಷ ಉದಯ ವರ್ಣೇಕರ ವಿನಂತಿಸಿದ್ದಾರೆ.

**ಮನೆಮನೆಗೆ ಬರುವ ಗಣಪನ ಭಕ್ತಿಯಿಂದ ಪೂಜಿಸೋಣ**

# ಗಣೇಶ ಹಬ್ಬ ಪರಿಸರ ಸ್ನೇಹಿಯಾಗಲಿ

ಗೌರಿ ಗಣೇಶ ಹಬ್ಬದ ಸಡಗರ ಸಂಭ್ರಮ. ಗಣೇಶೋತ್ಸವ ಸಮಾರಂಭ ನಗರ ಸೇರಿದಂತೆ ಪ್ರತಿ ರಾಜ್ಯದ ಎಲ್ಲ ಹಳ್ಳಿಗಳಲ್ಲಿ, ಮನೆಗಳಲ್ಲಿ, ಬೀದಿಗಳಲ್ಲಿ ಆಚರಿಸುತ್ತಾರೆ. ಗಣೇಶೋತ್ಸವಗಳು ಅತೀ ವಿಜೃಂಭಣೆಯಿಂದ ಆಚರಿಸುವ ಹಬ್ಬಗಳಲ್ಲಿ ಗಣೇಶ ಚತುರ್ಥಿಗೆ ತನ್ನದೇ ಆದ ವೈಶಿಷ್ಟ್ಯವಿದೆ. ಭಾದ್ರಪದ ಮಾಸ ಶುಕ್ಲ ಪಕ್ಷದ ಚತುರ್ಥಿಯಂದು ಆಚರಿಸುವ ಗಣೇಶನ ಹಬ್ಬ ಒಂದು ರೀತಿಯಲ್ಲಿ ವಿನಾಯಕನ ಹುಟ್ಟುಹಬ್ಬವೆಂದೇ ಹೇಳಬಹುದು.

ಗಣೇಶನ ಹಬ್ಬವನ್ನು ದೇಶದಾದ್ಯಂತ ಆಚರಿಸುತ್ತಾರೆ. ಜಾತಿ ಮತ ಬೇಧವಿಲ್ಲದೇ ಶ್ರೀ ಗಣೇಶನನ್ನು ವೈಭವದಿಂದ 5 ದಿನಗಳವರೆಗೆ ಪೂಜಿಸುತ್ತಾರೆ. ಕೆಲವರು ಒಂದೇ ದಿನ ಪೂಜಿಸುತ್ತಾರೆ. ಗಣೇಶನ ಪೂಜೆಯ ಮೊದಲ ದಿನವೇ ಗೌರಿಪೂಜೆ ಮಾಡುತ್ತಾರೆ. ದೇಶದಲ್ಲೇ ಅತಿ ಹೆಚ್ಚು ವೈಭವದಿಂದ ಗಣೇಶಹಬ್ಬ ಆಚರಿಸುವ ಮಹಾರಾಷ್ಟ್ರ, ಗೋವಾ, ತಮಿಳುನಾಡು ಮತ್ತು ಕರ್ನಾಟಕ ರಾಜ್ಯದ ಪ್ರತಿಯೊಂದು ಮನೆ ಮನೆಯಂಗಳದಲ್ಲಿ ಗಣಪತಿಯ ಮೂರ್ತಿಯನ್ನು ತಂದು ಪೂಜಿಸಿ, ಆರಾಧಿಸುತ್ತಾರೆ.

ಮನೆಯಲ್ಲಿ ಯಾವುದೇ ಶುಭ ಸಮಾರಂಭ ನಡೆಯುವ ಸಂದರ್ಭದಲ್ಲಿ ಕಾರ್ಯಕ್ರಮ ಆರಂಭವಾಗುವುದೇ ಗಣೇಶನ ಪೂಜೆಯಿಂದ. ಗಣಪತಿಯನ್ನು ವಿಘ್ನನಿವಾರಕ ಎನ್ನುತ್ತಾರೆ. ನಾವು ಮಾಡುವ ಕೆಲಸವು ಯಾವುದೇ ತೊಂದರೆಯಿಲ್ಲದೇ ಶೀಘ್ರವಾಗಿ ಪೂರ್ಣವಾಗಲಿ ಎಂದು ವಿನಾಯಕನಿಗೆ ಪೂಜೆ ಮಾಡುತ್ತೇವೆ. ಗಣೇಶನಿಗೆ ಏಕದಂತ, ಮಂಗಳಮೂರ್ತಿ, ವಿಘ್ನೇಶ್ವರ, ಲಂಬೋದರ, ವಿನಾಯಕ, ಗಜಮುಖ, ಮೂಷಿಕವಾಹನ, ಮೋದಕ ಪ್ರಿಯ, ಪಿಳ್ಳೈಯಾರ್ ಮುಂತಾದ ಅನೇಕ ಹೆಸರುಗಳಿವೆ. ವಿಘ್ನಗಳನ್ನು ವಿನಾಶ ಮಾಡುವುದರಿಂದ ವಿಘ್ನೇಶ್ವರ ಎಂದು ಕರೆಯುತ್ತೇವೆ. ಗಣೇಶ ಮೂರ್ತಿಗಳನ್ನು ವಿಸರ್ಜಿಸುವ ಮುನ್ನ ಹೂವು, ವಸ್ತ್ರ ಮುಂತಾದ ಪೂಜಾ ಸಾಮಗ್ರಿಗಳು, ಅಲಂಕಾರಿಕ ವಸ್ತುಗಳು ಕಾಗದ ಪ್ಲಾಸ್ಟಿಕ್‌ನಿಂದ ಮಾಡಲಾದ ವಸ್ತುಗಳನ್ನು ತೆಗೆಯಬೇಕು.

ವಿಸರ್ಜನೆ ಮಾಡುವ ಗಣೇಶನ ಮೂರ್ತಿಯನ್ನು ನೀರಿನಲ್ಲಿ



ವಿಸರ್ಜನೆ ಮಾಡುವುದರಿಂದ ನೀರು ಪವಿತ್ರವಾಗುತ್ತದೆ. ಕೆರೆ ಮತ್ತು ಸಮುದ್ರದ ನೀರಿನಲ್ಲಿ ಮಣ್ಣಿನ ಗಣೇಶ ವಿಗ್ರಹಗಳನ್ನು ಮಾತ್ರ ವಿಸರ್ಜನೆ ಮಾಡಬೇಕು. ಪ್ಲಾಸ್ಟಿಕ್ ವಸ್ತುಗಳು, ಮರ ಮತ್ತು ಬಿದಿರು ಕಡ್ಡಿಗಳ ಕಸ ವಿಲೇವಾರಿ ಸ್ಥಳಗಳಿಗೆ ನೀಡಬೇಕು. ನಮ್ಮ ಸುತ್ತಮುತ್ತ ಇರುವ ಪರಿಸರ ನಾವು ಕಾಪಡಬೇಕು. ಈ ಗಣೇಶ ಹಬ್ಬದಲ್ಲಿ ಪರಿಸರ ಸ್ನೇಹಿಯಾಗಿ ಮಣ್ಣಿನಿಂದ ಮಾಡಿದ ಗಣಪತಿಗಳನ್ನು ನಮ್ಮ ನಮ್ಮ ಮನೆಗಳಲ್ಲಿ ಪ್ರತಿಷ್ಠಾಪನೆ ಮಾಡಿ ಆಚರಿಸೋಣ.



**- ವಿ.ಎಂ.ಎಸ್. ಗೋಪಿ.**
ಸಾಹಿತಿಗಳು, ಬೆಂಗಳೂರು.

## ಗಣೇಶ ಹಬ್ಬಕ್ಕೆ ವಿವಿಧ ಬಗೆಯ ಕಜಾಯ

ಕುಚ್ಚಲಕ್ಕಿ ಕಜ್ಜಾಯ: ಕುಚ್ಚಲಕ್ಕಿ, ಬೆಲ್ಲ, ಕಾಯಿತುರಿ ತಲಾ ಒಂದು ಕಪ್, ಏಲಕ್ಕಿ ಪುಡಿ ಒಂದು ಚಮಚ.

ವಿಧಾನ: ಕುಚ್ಚಲಕ್ಕಿಯನ್ನು ಪಟಪಟ ಸಿಡಿಯುವ ತನಕ ಹುರಿಯಿರಿ. ಅನಂತರ ತರಿತರಿಯಾಗಿ ಬೀಸಿ ಅಥಾವ ಮಿಕ್ಸಿಗೆ ಹಾಕಿಕೊಳ್ಳಿ, ಬೆಲ್ಲ ಕಾಯಿತುರಿ, ಏಲಕ್ಕಿ ಮಿಶ್ರಣಕ್ಕೆ ಅಕ್ಕಿಯ ತರಿಯನ್ನು ಬೆರಸಿ.

ಕಪ್ಪು ಎಳ್ಳು ಕಜ್ಜಾಯ: ಕಪ್ಪು ಎಳ್ಳು, ಬೆಲ್ಲ, ತುರಿದ ಕಾಯಿತುರಿ ತಲಾ ಒಂದು ಕಪ್.

ವಿಧಾನ: ಕಪ್ಪು ಎಳ್ಳನ್ನು ಪಟಪಟ ಸಿಡಿಯುವ ತನಕ ಹುರಿಯಿರಿ. ಅನಂತರ ಅದನ್ನು ಅಗಲವಾದ ಪಾತ್ರೆಯಲ್ಲಿ ಅಥಾವ ಮೊರಕ್ಕೆ ಹಾಕಿ ಕೈಯಿಂದ ಮೆಲ್ಲನೆ ತಿಕ್ಕಿ. ಆಗ ಅದರ ಸಿಪ್ಪೆ ಬೇರೆಯಾಗುತ್ತದೆ. ಹೀಗೆ ಆರಿಸಿದ ಬಳಿಕ ಅದಕ್ಕೆ ಬೆಲ್ಲ ಹುರಿದ ಕಾಯಿತುರಿ, ಕಡಲೇಬೀಜ ಏಲಕ್ಕಿ ಹಾಕಿ ಕಲಸಿ.

# ಪಟಾಕಿ ಅಂಗಡಿಗಳ ಸ್ಥಳಾಂತರಕ್ಕೆ ಆದೇಶ



■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ವರ್ಷದ ಗಣೇಶ ಚತುರ್ಥಿ ಹಬ್ಬದ ಸಂದರ್ಭದಲ್ಲಿ ಪಟಾಕಿ ಮಾರಾಟವು ವಿಶೇಷವಾಗಿದ್ದು, ಹಬ್ಬದ ಹಾಗೂ ಇತರೆ ಯಾವುದೇ ಸಂದರ್ಭಗಳಲ್ಲಿ ಅಗ್ನಿಅನಾಹುತಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವುದು ಅವಶ್ಯವಿರುತ್ತದೆ.

ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಅಧಿಕೃತ ಪರವಾನಿಗೆ ಪಡೆದುಕೊಂಡ ಹಾಗೂ ತಹಸೀಲ್ದಾರರು ಸಲ್ಲಿಸಿದ ವರದಿಗಳಲ್ಲಿ ಶಿಫಾರಸ್ಸು ಮಾಡಿದ ಅಧಿಕೃತ ಲೈಸನ್ಸ್ ಹೊಂದಿ ಸಕ್ರಮಬದ್ಧವಾಗಿ ನವೀಕರಣವಾಗಿರುವ ಪಟಾಕಿ ಅಂಗಡಿಗಳನ್ನು ಸೆಪ್ಟೆಂಬರ್ 5ರಿಂದ 18ರವರೆಗೆ ಗದಗ ಜಿಲ್ಲೆಯ ನಗರ/ಪಟ್ಟಣ/ಗ್ರಾಮೀಣ ಪ್ರದೇಶಗಳ ಕೆಳಗೆ ತಿಳಿಸಿದ ತೆರೆದ ಸ್ಥಳಗಳಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ಮಾರಾಟ ಮಾಡುವ ಷರತ್ತಿಗೊಳಪಟ್ಟು ತಾತ್ಕಾಲಿಕವಾಗಿ ಸ್ಥಳಾಂತರಿಸಲು ಆದೇಶಿಸಲಾಗಿದೆ. ಇನ್ನುಳಿದ ಪಟಾಕಿ ಅಂಗಡಿಗಳಿಗೆ ವ್ಯಾಪಾರ ಮಾಡುವುದನ್ನು ನಿರ್ಬಂಧಿಸಿದೆ.

ಗದಗ ತಾಲೂಕಿನಲ್ಲಿ-ಗದಗ ನಗರದ ವಿ.ಡಿ.ಎಸ್.ಟಿ ಕಾಲೇಜು ಮೈದಾನದಲ್ಲಿ ಹಾಗೂ ಮುಳಗುಂದದ ಎಸ್.ಜೆ.ಜೆ.ಎಂ. ಸಂಯುಕ್ತ ಪದವಿಪೂರ್ವ ಕಾಲೇಜಿನಲ್ಲಿ, ರೋಣ ತಾಲೂಕಿನಲ್ಲಿ-ರೋಣದ ಜಕ್ಕಲಿ ರಸ್ತೆಯಲ್ಲಿ ಬರುವ ಸೊಸೈಟಿಯ ಬಯಲು ಜಾಗೆಯಲ್ಲಿ ಹಾಗೂ ಹೊಳೆಆಲೂರು ಎಪಿಎಂಸಿ ಬಯಲು ಜಾಗೆಯಲ್ಲಿ, ಗಜೇಂದ್ರಗಡ ತಾಲೂಕಿನಲ್ಲಿ-ಗಜೇಂದ್ರಗಡದ ಶ್ರೀ ಸಂತೊಷತಂದೆ ಶ್ಯಾಮಸುಂದರ ಮಂತ್ರಿ ಇವರ ಖುಲ್ಲಾ ಜಾಗೆ ಹಾಗೂ ನರೇಗಲ್‌ದ ಎಪಿಎಂಸಿ ಗೌಡಾನ್ ಹತ್ತಿರ ಬಯಲು ಜಾಗೆಯಲ್ಲಿ, ಶಿರಹಟ್ಟಿ ತಾಲೂಕಿನಲ್ಲಿ-ಶಿರಹಟ್ಟಿಯ ಎಫ್‌ಎಮ್ ಡಬಾಲಿ ಹೈಸ್ಕೂಲ್ ಮೈದಾನ ಹಾಗೂ ಬೆಳ್ಳಟ್ಟಿಯ ಶ್ರೀ ಯೊಗಿ ವೇಮನ ಪ್ರೌಢಶಾಲೆ ಮೈದಾನದಲ್ಲಿ, ಲಕ್ಷ್ಮೇಶ್ವರ ತಾಲೂಕಿನಲ್ಲಿ ಉಮಾ ಮಹಾವಿದ್ಯಾಲಯದ ಕ್ರೀಡಾಂಗಣ ಹಾಗೂ ಶಿಗ್ಲಿ ಹೊಸ ಬಸ್ ಸ್ಟ್ಯಾಂಡ್ ಹತ್ತಿರದ ಬಯಲು ಜಾಗೆಯಲ್ಲಿ, ಮುಂಡರಗಿ ತಾಲೂಕಿನಲ್ಲಿ-ಮುಂಡರಗಿಯ ತಾಲೂಕು ಕ್ರೀಡಾಂಗಣದಲ್ಲಿ, ನರಗುಂದ ತಾಲೂಕಿನಲ್ಲಿ-ನರಗುಂದದ ಹಾಲಭಾವಿ ಕೆರೆಯ ಬಯಲು ಜಾಗೆಯಲ್ಲಿ ತಾತ್ಕಾಲಿಕ ಶೆಡ್ಡುಗಳನ್ನು, ಅಗ್ನಿಶಾಮಕ ಇಲಾಖೆಯ ಕರಾರುಗಳಂತೆ ನಿರ್ಮಿಸಿಕೊಂಡು ಹಾಗೂ ಸುರಕ್ಷತೆಯ ಎಲ್ಲ ವ್ಯವಸ್ಥೆಗಳನ್ನು ಅಳವಡಿಸಿಕೊಂಡು ಹಸಿರು ಪಟಾಕಿಗಳನ್ನಷ್ಟೇ ಮಾರಾಟ ಮಾಡಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಗೋವಿಂದರೆಡ್ಡಿ ಆದೇಶಿಸಿದ್ದಾರೆ.



ಡಾ. ಸರ್ವಪಲ್ಲಿ ರಾಧಾಕೃಷ್ಣನ್‌ರ ಜನ್ಮದಿನಾಚರಣೆ ಅಂಗವಾಗಿ ಗದಗ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರಿಗೆ ಶಿಕ್ಷಕ ಡಿ.ಎಂ. ದ್ಯಾಮಣ್ಣವರ ಮತ್ತು ಗುರು ಬಳಗದ ವತಿಯಿಂದ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಹಿರಿಯ ಶಿಕ್ಷಕರಾದ ಎಸ್.ಸಿ. ದೈವಜ್ಞ ಆಚಾರ್ಯರು, ಎಫ್.ವಾಯ್. ಪಾಟೀಲ ಗುರುಗಳು, ಸಂತೋಷ ದಾಮೋದರ, ಅಣ್ಣಪ್ಪ ನೀಲಗಿರಿ ಮುಂತಾದವರಿದ್ದರು.

**ಎಮ್ಮೆಗಳಲ್ಲಿ ಕಂಡುಬರುವ ಮಾರಕ ಕಾಯಿಲೆಯನ್ನು ನಿರ್ಲಕ್ಷಿಸದಿರಿ**

# ಎಮ್ಮೆಗಳಲ್ಲಿ ವಪೆಯ ಹರ್ನಿಯಾ



ಹರ್ನಿಯಾ ಎಂಬ ಪದವನ್ನು ನೀವು ಕೇಳಿಯೇ ಇರುತ್ತೀರಿ. ಸಾಮಾನ್ಯವಾಗಿ ಮಾನವರಲ್ಲಿ ಉಂಟಾಗುವ ಹೊಕ್ಕಳು ಬಳ್ಳಿಯ ಹರ್ನಿಯಾದ ಬಗ್ಗೆ ನೀವು ದಿನಪತ್ರಿಕೆಯಲ್ಲಿ ಅಥವಾ ದೂರದರ್ಶನದ ಕಾರ್ಯಕ್ರಮಗಳಲ್ಲಿ ಕೇಳಿರುತ್ತೀರಿ. ಆದರೆ ನಾವೀಗ ಮಾತನಾಡುತ್ತಿರುವ ಹರ್ನಿಯಾವು ಜಾನುವಾರುಗಳಲ್ಲಿ ಅದರಲ್ಲೂ ಎಮ್ಮೆಗಳಲ್ಲಿ ಹೆಚ್ಚು ಕಂಡು ಬರುತ್ತದೆ.

ವಪೆಯು ಮಾನವನ ಅಥವಾ ಪ್ರಾಣಿಗಳ ಎದೆಗೂಡು ಮತ್ತು ಹೊಟ್ಟೆಯ ಭಾಗವನ್ನು ಬೇರ್ಪಡಿಸುವ ಒಂದು ಸ್ನಾಯುವಾಗಿದೆ. ಇದು ಒಂದು ತೆಳು ಪರದೆಯಂತಿದ್ದು, ನಯವಾಗಿ ಮತ್ತು ಸ್ಥಿತಿಸ್ಥಾಪಕತ್ವ ಶಕ್ತಿಯನ್ನು ಹೊಂದಿರುತ್ತದೆ. ಉಸಿರಾಟದ ಕ್ರಿಯೆಗಳಲ್ಲಿ ಇದು ಅತಿ ಮುಖ್ಯವಾಗಿ ಉಚ್ವಾಸ ಮತ್ತು ನಿಶ್ವಾಸ ಕ್ರಿಯೆಗಳಿಗೆ ಸಹಕಾರಿಯಾಗಿದೆ. ಆದ್ದರಿಂದ ಇದಕ್ಕೆ ಹರಿತ ಅಥವಾ ಗಾಯ ಉಂಟಾದಾಗ ಉಸಿರಾಟದ ತೊಂದರೆಗಳು ಕಾಣಿಸಿಕೊಳ್ಳುತ್ತವೆ.

ವಪೆಯಲ್ಲಿ ಹರಿತ ಉಂಟಾದಾಗ ಜಾನುವಾರಗಳ ಹೊಟ್ಟೆಯ ಭಾಗಗಳು ಹರಿತದ ಮೂಲಕ ಎದೆಗೂಡನ್ನು ಪ್ರವೇಶಿಸುತ್ತವೆ. ಇದನ್ನೇ ವಪೆಯ ಹರ್ನಿಯಾ ಎನ್ನುತ್ತಾರೆ. ಜಾನುವಾರುಗಳಲ್ಲಿ ವಪೆಯ ಹರ್ನಿಯಾಗೆ ಹೇರಳವಾದ ಕಾರಣಗಳಿವೆ. ಅವು ಯಾವುವೆಂದರೆ, ಆಕಳು-ಎಮ್ಮೆಗಳಲ್ಲಿ ಉಂಟಾಗುವ ಹೊಟ್ಟೆ ಉಬ್ಬರ, ಚೂಪಾದ ವಸ್ತುಗಳಿಂದ ವಪೆಗೆ ಹರಿತ ಉಂಟಾಗುವುದು, (ಚೂಪಾದ ವಸ್ತುಗಳಾದ ಪ್ರಾಣಿಗಳ ಉಗುರುಗಳು, ತಂತಿ, ಎಲುಬಿನ ಚೂರು, ಸೂಜಿ ಇತ್ಯಾದಿಗಳನ್ನು ಜಾನುವಾರುಗಳು ಮೇಯುವ ವೇಳೆ ಸೇವಿಸಿದಾಗ ಈ ವಸ್ತುಗಳು ಹೊಟ್ಟೆಯ ಭಾಗವಾದ ಜೇನುಗೂಡಿನಂತಹ ರಚನೆ ಹೊಂದಿರುವ ರೆಟಿಕ್ಯುಲಂ (ಖಜಣುಛಿಣಾಟಣಾಟ) ಅನ್ನು ಛೇದಗೊಳಿಸಿ ನಂತರ ವಪೆಯನ್ನು ಸಹ ಛೇದಗೊಳಿಸುತ್ತವೆ) ಜೋರಾಗಿ ಬಿದ್ದಾಗ, ಕೊನೆಯ ಹಂತದ ಗರ್ಭಾವಸ್ಥೆ, ಕರು ಹಾಕುವ ಸಮಯದಲ್ಲಿ ಉಂಟಾಗುವ ಒತ್ತಡ, ವಪೆಯ ದುರ್ಬಲತೆ ಮುಂತಾದವುಗಳು.

ಲಕ್ಷಣಗಳು: ಹೊಟ್ಟೆಯುಬ್ಬರ (ಇದು ಔಷಧಗಳಿಂದ ಗುಣವಾಗುತ್ತಿರುವುದಿಲ್ಲ ಹಾಗೂ ಚಿಕಿತ್ಸೆಯ ನಂತರ ಮತ್ತೆ ಉಂಟಾಗುತ್ತಿರುತ್ತದೆ) ಕೆಮ್ಮುವಿಕೆ, ಕಿಬ್ಬೊಟ್ಟೆಯ ನೋವು, ಮೇಯಲು ಅಥವಾ ತಿನ್ನುವುದನ್ನು ನಿರಾಕರಿಸುವಿಕೆ, ಹಾಲಿನ ಉತ್ಪಾದನೆಯಲ್ಲಿ ಹೇರಳವಾಗಿ ಕಡಿಮೆಯಾಗುವಿಕೆ, ತೂಕ ನಷ್ಟ ಸರಿಯಾಗಿ ಪಚನ ಕ್ರಿಯೆ ನಡೆಯದಿರುವುದು ಇದರಿಂದ ದುರ್ಗಂಧದಿಂದ ಕೂಡಿರುವ ಸಗಣಿ ಹಾಕುವಿಕೆ ಮುಂತಾದವುಗಳು ಕಾಣಿಸಿಕೊಳ್ಳುತ್ತವೆ.

ವಪೆಯ ಹರ್ನಿಯಾಗೆ ಶಸ್ತ್ರಚಿಕಿತ್ಸೆಯೇ ಸೂಕ್ತವಾಗಿದೆ. ಹರ್ನಿಯಾಗೆ ಎರಡು ಶಸ್ತ್ರಚಿಕಿತ್ಸೆಗಳ ಅವಶ್ಯಕತೆ ಇದೆ. ಮೊದಲನೆಯದು ಕಿಬ್ಬೊಟ್ಟೆಯ ಶಸ್ತ್ರಚಿಕಿತ್ಸೆ, ಎರಡನೆಯದು ವಪೆಯ ಹರ್ನಿಯಾದ ಶಸ್ತ್ರಚಿಕಿತ್ಸೆ. ಇವು ಒಂದಕ್ಕೊಂದು ಪೂರಕವಾಗಿವೆ. ಏಕೆಂದರೆ ಎರಡನೇ ಶಸ್ತ್ರಚಿಕಿತ್ಸೆ ಮಾಡುವಾಗ ಹೊಟ್ಟೆಯು ಪೂರ್ಣ ಪ್ರಮಾಣದಲ್ಲಿ ಖಾಲಿ ಇರಬೇಕಾಗುತ್ತದೆ ಅಥವಾ ಎರಡನೇ ಮೂರು ಭಾಗದಷ್ಟು ಖಾಲಿ ಇರಬೇಕಾಗುತ್ತದೆ.

ಶಸ್ತ್ರ ಚಿಕಿತ್ಸೆ ನಿರ್ವಹಿಸಿದವರು: ಡಾ. ಜಹಾಂಗೀರ್ ಬಾಷಾ ದೊಡ್ಡಮನಿ, ಡಾ. ಆನಂದ ಮಲ್ಲೇರ್, ಪಶುವೈದ್ಯಕೀಯ ಶಸ್ತ್ರಚಿಕಿತ್ಸೆ ಮತ್ತು ವಿಕಿರಣ ಶಾಸ್ತ್ರ ವಿಭಾಗ, ಪಶುವೈದ್ಯಕೀಯ ಕಾಲೇಜು- ಗದಗ.

**- ವಿರೇಶ ದೊಡ್ಡಮನಿ.**
**ಪಶು ವೈದ್ಯಕೀಯ ವಿದ್ಯಾರ್ಥಿ, ಗದಗ.**

## ಶಸ್ತ್ರಚಿಕಿತ್ಸೆಯ ನಂತರ ರೈತರು ಅನುಸರಿಸಬೇಕಾದ ಅಂಶಗಳು

1) ಹೊಲಿಗೆಯ ಗಾಯದ ಜಾಗವನ್ನು ನೀರು ತಾಗದಂತೆ ನೋಡಿಕೊಳ್ಳಬೇಕು ಮತ್ತು ಹೊಲಿಗೆಯ ಗಾಯದ ಜಾಗವನ್ನು ಆಗಾಗ ಸಿಪ್ಲಾಡಿನ್ (Cipladine) ಅಥವಾ ಲೋರೆಕ್ಸೇನ್ (Lorexane) ಮುಲಾಮಿನಿಂದ ಡ್ರೆಸ್ಸಿಂಗ್ ಮಾಡಬೇಕಾಗುತ್ತದೆ.
2) ಎಮ್ಮೆಗಳಿಗೆ ಚಿಕಿತ್ಸೆಯ ನಂತರ ಹೆಚ್ಚಿನ ಒತ್ತಡದಲ್ಲಿ ಅಂದರೆ ಗುಡ್ಡಗಾಡಿನ ಪ್ರದೇಶದಲ್ಲಿ ಮೇಯಿಸುವುದು, ಬೇಸಿಗೆಯಲ್ಲಿ ಮೇಯಿಸುವುದು, ಜೋರಾಗಿ ಓಡಿಸುವುದು ಇತ್ಯಾದಿಗಳನ್ನು ಮಾಡಬಾರದು. ಏಕೆಂದರೆ ಹೆಚ್ಚಿನ ಒತ್ತಡದಿಂದ ವಪೆಯು ಪುನಃ ಹರ್ನಿಯಾಗೆ ಒಳಗಾಗುವ ಸಾಧ್ಯತೆ ಇರುತ್ತದೆ.
3) ಎಮ್ಮೆಗಳಿಗೆ ಶಸ್ತ್ರಚಿಕಿತ್ಸೆಯ ನಂತರ ಸರಳವಾಗಿ ಜೀರ್ಣವಾಗುವ ಆಹಾರಗಳನ್ನು ನೀಡಬೇಕು. ಉದಾಹರಣೆಗೆ ನುಚ್ಚು, ತೌಡು, ಹಸಿ ಹುಲ್ಲು, ಗಂಜಿ, ಬೆಲ್ಲದ ನೀರು ಇತ್ಯಾದಿ.
4) ಎಮ್ಮೆಗಳಿಗೆ ಕನಿಷ್ಠ ನಾಲ್ಕು ತಿಂಗಳುಗಳವರೆಗೆ ಕೃತಕ ಗರ್ಭಧಾರಣೆಯನ್ನು ಮಾಡಿಸಬಾರದು.

# ತುರುಸಿನ ಬಯಲು ಕುಸ್ತಿ ಪಂದ್ಯಾವಳಿ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಹಾಲಗೊಂಡ ಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಕಳೆದ ಮೂರು ದಿನಗಳಿಂದ ಜರುಗಿದ ಬಯಲು ಕುಸ್ತಿ ಪಂದ್ಯಾವಳಿಯು ತುರುಸಿನಿಂದ ನಡೆದು, ಆಸಕ್ತರನ್ನು ರಂಜಿಸಿತು.


ಇಲ್ಲಿಯ ಮಾರುತಿ ದೇವಸ್ಥಾನದ ಬಯಲು ಜಾಗದಲ್ಲಿ ನಡೆದ ಮೂರನೇ ದಿನದ ಪಂದ್ಯಾವಳಿಯ ಅಂತಿಮ ಪಂದ್ಯದಲ್ಲಿ ಪರ್ಸಿ ಪೈಕಿ ಗುಲಬುರ್ಗಾದ ಸಿದ್ದಪ್ಪ ಅವರು ಸ್ಪರ್ದೆಗೆ ಇಳಿದರು. ಇವರ ಎದುರು ಲಕ್ಕುಂಡಿ ಮಂಜುನಾಥ ಸ್ಪರ್ದೆಗೆ ಇಳಿದರು. ಆದರೆ ಸಿದ್ದಪ್ಪ ಪೈಲಾವಾನ ಮಂಜುನಾಥನಿಗಿಂತ ಎರಡರಷ್ಟು ಬಲಿಷ್ಠನಾಗಿದ್ದರಿಂದ ಸಿದ್ದಪ್ಪ ಜಯಶಾಲಿಯಾದನು. ಈ ಪಂದ್ಯ ಪ್ರೇಕ್ಷಕರಲ್ಲಿ ಅಷ್ಟೇನೂ ಉತ್ಸಾಹ ತರಲಿಲ್ಲ.

ಉಳಿದಂತೆ ಸೆಮಿಫೈನಲ್ ಪಂದ್ಯದಲ್ಲಿ ಅರ್ಧ ಗಂಟೆಗೂ ಹೆಚ್ಚು ಕಾಲ ಹಣಾಹಣಿ ನಡೆಯಿತು. ಆದರೆ ಇವರು ಬಹಳ ಸಮಯ ತೆಗೆದು-ಕೊಂಡಿದ್ದರಿಂದ ಸ್ಪರ್ದೆಯನ್ನು ಸಮ ಎಂದು ಘೋಷಣೆ ಮಾಡಲಾಯಿತು. ಇದಕ್ಕೂ ಪೂರ್ವ ನಡೆದ ಪಂದ್ಯದಲ್ಲಿ ಧಾರವಾಡ ಜಿಲ್ಲೆಯ ನೂಲ್ವಿ ಗ್ರಾಮದ ಬಾಕರ್ ಪೈಲವಾನನ ಆಟವು ಪ್ರೇಕ್ಷಕರಲ್ಲಿ ಉತ್ಸಾಹ ತುಂಬಿ ತನ್ನ ವಿವಿಧ ಹಿಡಿತದಲ್ಲಿ ಮಾಸೂರು ಗ್ರಾಮದ ಸಂದೀಪನ್ನು ಕೆಡವಿದನು.

ಈ ಪೈಲವಾನನಿಗೆ ನೆರೆದ ಪ್ರೇಕ್ಷಕರು ಧನ ಕಾಣಿಕೆಯನ್ನು ನೀಡಿದ್ದು ವಿಶೇಷವಾಗಿತ್ತು. ಕರಡಿಕೊಪ್ಪದ ಸೋನು ಪೈಲವಾನನ್ನು ಲಕ್ಕುಂಡಿಯ ಸಲೀಂ ಪೈಲವಾನ ಸೋಲಿಸಿದರು. ಇನ್ನೂ ಸಲೀಂ ಮಾಸೂರು-ಮಂಜುನಾಥ ಲಕ್ಕುಂಡಿ, ಮಣಿಕಂಠ ಲಕ್ಕುಂಡಿ-ಬಸವರಾಜ ಧಾರವಾಡ, ಕೃಷ್ಣಾ ಗುಲಬುರ್ಗಾ-ಮಧು ಭದ್ರಾವತಿ, ಶೇಖಪ್ಪ ಬೊಮ್ಮನಳ್ಳಿ-ಮಲ್ಲಿಕಾರ್ಜುನ ಕುರ್ತುಕೋಟಿ, ಸಿದ್ದು ಧಾರವಾಡ-ನಿಂಗಪ್ಪ ಬೊಮ್ಮನಹಳ್ಳಿ, ಸಲೀಂ ಮಾಸೂರು- ದಾನಪ್ಪ ಲಕ್ಕುಂಡಿ, ಕೃಷ್ಣಾ ಗುಲಬುರ್ಗಾ-ಶೇಖಪ್ಪ ಬೊಮ್ಮನಳ್ಳಿ ವಿರುದ್ಧ ನಡೆದ ಸ್ಪರ್ಧೆಗಳು ಜನ ಮನ ಸೆಳೆದವು.

ಗ್ರಾಮದ ಸುತ್ತಮುತ್ತಲಿನ ಕುಸ್ತಿ ಅಭಿಮಾನಿಗಳು ಸ್ಪರ್ಧೆ ನೋಡಲು ಆಗಮಿಸಿದ್ದರು. ಲಕ್ಕುಂಡಿ ಮಾಜಿ ಪೈಲವಾನರು ನಿರ್ಣಾಯಕರಾಗಿ ಸೇವೆ ಸಲ್ಲಿಸಿದರು. ಹಾಲಗೊಂಡ ಬಸವೇಶ್ವರ ಸೇವಾ ಸಮಿತಿ, ಗ್ರಾಮ ಪಂಚಾಯತ ಹಾಗೂ ಮಾಜಿ ಪೈಲವಾನರ ಸಂಘದ ಆಶ್ರಯದಲ್ಲಿ ಪಂದ್ಯಾವಳಿ ಜರುಗಿತು. ಜಯಶಾಲಿಯಾದ ಕುಸ್ತಿ ಪಟುಗಳಿಗೆ ಸೂಕ್ತ ಬಹುಮಾನ ನೀಡಿ ಪ್ರೋತ್ಸಾಹಿಸಿದರು.

# ಗಂಧದ ಗುಡಿ ಬಳಗದಿಂದ ಶಿಕ್ಷಕರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಗಂಧದ ಗುಡಿ ಬಳಗ ಹಾಗೂ ಕರ್ನಾಟಕ ಪ್ರಜಾಪರ ವೇದಿಕೆ ವತಿಯಿಂದ ಶಿಕ್ಷಕರ ದಿನಾಚರಣೆಯ ಪ್ರಯುಕ್ತ ಗುರುವಾರ ಪಟ್ಟಣದ ಸರಕಾರಿ ಹಿರಿಯ ಕನ್ನಡ ಗಂಡು ಮಕ್ಕಳ ಶಾಲೆಯ ಶಿಕ್ಷಕರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಬಳಗದ ರಾಜ್ಯ ಕಾರ್ಯಕಾರಿ ಸಮಿತಿ ಸಂಚಾಲಕ ಹಸನ ತಹಸೀಲ್ದಾರ, ದೇಶದ ಪರಂಪರೆಯಲ್ಲಿ ಗುರುವಿಗೆ ಮಹತ್ವದ ಸ್ಥಾನ ನೀಡಲಾಗಿದೆ. ಸಮಾಜದಲ್ಲಿ ಒಬ್ಬ ವ್ಯಕ್ತಿಯನ್ನು ಒಳ್ಳೆಯ ವ್ಯಕ್ತಿಯನ್ನಾಗಿ ರೂಪಿಸುವಲ್ಲಿ ಗುರುವಿನ ಪಾತ್ರ ಮಹತ್ವದ್ದಾಗಿದೆ. ಗುರುಕುಲ ಶಿಕ್ಷಣದಿಂದ ಹಿಡಿದು ಇಂದಿನ ಆಧುನಿಕ ಶಿಕ್ಷಣದವರೆಗೂ ಶಿಕ್ಷಕರು ವಿದ್ಯಾರ್ಥಿಗಳ ಜೀವನ ರೂಪಿಸುವಲ್ಲಿ ತಮ್ಮನ್ನು ಅರ್ಪಿಸಿಕೊಳ್ಳುತ್ತಿದ್ದಾರೆ. ಅವರ ಕಾರ್ಯ ನಿಜಕ್ಕೂ ಶ್ಲಾಘನೀಯ. ವಿದ್ಯಾರ್ಥಿಗಳ ಬಾಳನ್ನು ಬೆಳಗಿಸುವ ಶಿಕ್ಷಕರಿಗೆ ನಾವೆಲ್ಲರೂ ಚಿರಋಣಿಯಾಗಿರೋಣ ಎಂದು ಹೇಳಿದರು.

ಶಾಲೆಯ ಮುಖ್ಯೋಪಾಧ್ಯಾಯ ಎಸ್.ಎಚ್. ಪೂಜಾರ, ಶಿಕ್ಷಕರಾದ ಎಸ್.ಬಿ. ಖೋಕಲೆ, ಎಂ.ವಾಯ್. ಹರಿಜನ, ಎಸ್.ಎಸ್. ಶೆಟ್ಟರ, ಎಸ್.ಎಫ್. ಸುಣಗಾರ, ಎಸ್.ಸಿ. ಮೂರಶಿಳ್ಳಿ, ಪಿ.ಪಿ. ಗಾಣಿಗೇರ, ಎಸ್.ಎ. ಮಡಿವಾಳರ, ಶರೀಫ ಗುಡಿಮನಿ, ಶಿವಾನಂದ ಸುಲ್ತಾನಪೂರ, ಅನಿಲ ಗುಡಿಮನಿ, ಕಳಕಪ್ಪ ಬಿಸನಳ್ಳಿ ಮುಂತಾದವರು ಉಪಸ್ಥಿತರಿದ್ದರು.

# ಬೆಳವಣಕಿಯಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಬೆಳವಣಕಿ

ಬಿಜೆಪಿ ಸದಸ್ಯತ್ವ ಅಭಿಯಾನದ ಅಂಗವಾಗಿ ಗ್ರಾಮದಲ್ಲಿ ಸ್ವಚ್ಛತಾ ಕಾರ್ಯ ನಡೆಸಲಾಯಿತು.

ಗ್ರಾಮದ ಹಕ್ಕಾಪಕ್ಕಿ ಅವರ ದೊಡ್ಡ ಅಂಗಡಿ ಹತ್ತಿರ ಇರುವ ಬಾವಿಯೊಳಗೆ ಇಳಿದ ಬಿಜೆಪಿ ಮುಖಂಡ ಬಸವರಾಜ್ ನಾಯ್ಕರ್, ಅದರಲ್ಲಿದ್ದ ಕಸಕಡ್ಡಿ ತೆಗೆದು ಸ್ವಚ್ಛ ಮಾಡಿದರು.

ಬಿಜೆಪಿ ಯುವ ಮೋರ್ಚಾ ಹೊಳೆಆಲೂರ ಮಂಡಲದ ಅಧ್ಯಕ್ಷ ಶರಣು ಬರಶೆಟ್ಟಿ ನೇತೃತ್ವದಲ್ಲಿ ಈ ಅಭಿಯಾನ ನಡೆಸಲಾಯಿತು.

ಈ ಸಂದರ್ಭದಲ್ಲಿ ಮುಖಂಡರಾದ ಸೋಮು ಬ ಚರೇದ, ಈರಪ್ಪ ತಾಳಿ, ಇಸ್ಮಾಯಿಲ್ ಗದಗ, ಬಸು ಗುದ್ದಿ, ಅಜಿತ್ ನಾಗನೂರು, ಮುದಿಯಪ್ಪ ದಾನಿ, ಪೂಜಾರಪ್ಪ ಮಾದರ ಸೇರಿದಂತೆ ಅನೇಕರಿದ್ದರು.



ಗುರುವಿನ ಭಾವನೆ ಮಕ್ಕಳ ಉನ್ನತಿಯನ್ನು ಬಯಸುತ್ತದೆ: ಟಿ.ಈಶ್ವರ

# ಮಕ್ಕಳಿಗೆ ಮೌಲ್ಯಯುತ ಜ್ಞಾನ ನೀಡಿ

■ವಿಜಯಸಾಕ್ಷಿ ಸುದ್ದಿ, ರೋಣ

ಶಿಕ್ಷಕರು ಮಕ್ಕಳಿಗೆ ದಂಡಿಸಿದರೆ ಮಾತ್ರ ಅವರು ಪ್ರಗತಿ ಹೊಂದಲು ಸಾಧ್ಯ. ಆದ್ದರಿಂದ ಶಿಕ್ಷಕರು ಮಕ್ಕಳನ್ನು ದಂಡಿಸಿದ್ದಾರೆಂದು ತಿಳಿದು ಶಾಲೆಯ ತನಕ ಯಾವ ಪಾಲಕರೂ ಹೋಗಬೇಡಿ ಎಂದು ಅರಣ್ಯ ನಿಗಮದ ಮಾಜಿ ಅಧ್ಯಕ್ಷ ಟಿ.ಈಶ್ವರ ಹೇಳಿದರು.

ಅವರು ಗುರುವಾರ ಪಟ್ಟಣದ ಗುರುಭವನದಲ್ಲಿ ಜರುಗಿದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿದರು.

ಈ ಹಿಂದೆ ಶಿಕ್ಷಕರು ಶಾಲೆಗೆ ಬರುವ ವಿದ್ಯಾರ್ಥಿಗಳನ್ನು ದಂಡಿಸುತ್ತಿದ್ದರು. ಕಾರಣ ನಮ್ಮ ಕೈಯಲ್ಲಿ ಅಕ್ಷರ ಜ್ಞಾನ ಪಡೆಯುವ ಮಕ್ಕಳ ಭವಿಷ್ಯ ಉಜ್ವಲವಾಗಿರಲಿ ಎಂದು. ಈಗಲೂ ಸಹ ಗುರುವಿನ ಭಾವನೆ ಮಕ್ಕಳ ಉನ್ನತಿಯನ್ನು ಬಯಸುತ್ತದೆ. ವಿಪರ್ಯಾಸ ಅಂದರೆ ಪಾಲಕರು ಶಾಲೆಯ ತನಕ ಹೋಗಿ ನಮ್ಮ ಮಕ್ಕಳನ್ನು ಯಾವ ವಿಷಯಕ್ಕೆ ದಂಡಿಸಿದಿರಿ ಎನ್ನುವ ಕಾಲ ಬಂದಿದ್ದು, ಇದು ಮಕ್ಕಳ ಶೈಕ್ಷಣಿಕ ಚಟುವಟಿಕೆಯ ಮೇಲೆ ಪರಿಣಾಮ ಬಿರುತ್ತದೆ ಎನ್ನುವುದನ್ನು ಪಾಲಕರು ಸಹ ತಿಳಿದುಕೊಳ್ಳಬೇಕು ಎಂದರು.



ಮುಖ್ಯವಾಗಿ ಶಿಕ್ಷಕರು ಮಾನವೀಯ ಮೌಲ್ಯಗಳ ಆಧಾರದಲ್ಲಿ ಮಕ್ಕಳಿಗೆ ಅಕ್ಷರ ಜ್ಞಾನ ನೀಡಬೇಕು. ಮಕ್ಕಳಲ್ಲಿ ಅಡಕವಾಗಿರುವ ಭಯವನ್ನು ತೊರೆದು ಹಾಕುವಲ್ಲಿ, ಅವರಲ್ಲಿ ನೈತಿಕತೆಯ ಬಲ ತುಂಬುವಲ್ಲಿ ಶಿಕ್ಷಕರು ಪ್ರಮುಖ ಪಾತ್ರ ವಹಿಸಬೇಕು. ಸಮಾಜ ಏಕತೆ ಹಾಗೂ ಸದೃಢತೆಯಿಂದ ಸಾಗಬೇಕಾದರೆ ಶಿಕ್ಷಕರ ಕರ್ತವ್ಯ ನಿಷ್ಠೆ ಪ್ರಮುಖವಾಗಿದ್ದು, ಈ ನಿಟ್ಟಿನಲ್ಲಿ ಶಾಲಾ ವಿದ್ಯಾರ್ಥಿಗಳನ್ನು ಬೆಳೆಸಬೇಕು ಎಂದು ಸಲಹೆ ನೀಡಿದರು.

ಸಾನ್ನಿಧ್ಯವನ್ನು ಗುರುಪಾದ ದೇವರು, ಅಧ್ಯಕ್ಷತೆಯನ್ನು ಶಾಸಕ ಜಿ.ಎಸ್. ಪಾಟೀಲ ವಹಿಸಿದ್ದರು.

ಸಭೆಯಲ್ಲಿ ವಿ.ಆರ್. ಗುಡಿಸಾಗರ, ಬಸವರಾಜ ನವಲಗುಂದ, ಯೂಸುಫ್ ಇಟಗಿ, ವಿ.ಬಿ. ಸೋಮನಕಟ್ಟಿಮಠ, ಬಿಇಒ ರುದ್ರಪ್ಪ ಹುರಳಿ, ವಾಯ್.ಡಿ. ಗಾಣಿಗೇರ, ಸಿ.ಕೆ. ಕೇಸರಿ, ಎಂ.ಎ. ಫಣಿಬಂದ, ಮಂಜುಳಾ ರೇವಡಿ, ಜಿ.ಪಂ ಮಾಜಿ ಅಧ್ಯಕ್ಷೆ ಮಂಜುಳಾ ಹುಲ್ಲಣ್ಣವರ, ನಾಜಬೇಗಂ ಯಲಿಗಾರ ಸೇರಿದಂತೆ ಮುಖಂಡರು, ಅಧಿಕಾರಿಗಳು, ಶಿಕ್ಷಕರು ಉಪಸ್ಥಿತರಿದ್ದರು.

ಈ ಬಾರಿಯ ಶಿಕ್ಷಕರ ದಿನಾಚರಣೆ ನಿಮಿತ್ತ ಶಾಸಕ ಜಿ.ಎಸ್. ಪಾಟೀಲರು 1600ಕ್ಕೂ ಹೆಚ್ಚು ಶಿಕ್ಷಕರು ಹಾಗೂ ಅಧಿಕಾರಿಗಳು ಸೇರಿದಂತೆ 2 ಸಾವಿರಕ್ಕೂ ಹೆಚ್ಚು ಜನರಿಗೆ ಹೋಳಿಗೆ ಊಟ ಬಡಿಸಿದ್ದು ವಿಶೇಷವಾಗಿತ್ತು. ಜೊತೆಗೆ ಖಾಸಗಿ ಹಾಗೂ ಸರಕಾರಿ ಶಾಲೆಗಳ ಸರ್ವ ಶಿಕ್ಷಕರುಗಳಿಗೆ ನೆನಪಿನ ಕಾಣಿಕೆಯಾಗಿ ಬ್ಯಾಗ್ ವಿತರಿಸುವ ಮೂಲಕ ಶಾಸಕ ಜಿ.ಎಸ್. ಪಾಟೀಲರು ಶಿಕ್ಷಕ ವೃಂದಕ್ಕೆ ಗೌರವ ಸಲ್ಲಿಸಿದರು.

## ಯೋಜನೆಗಳ ಸದುಪಯೋಗವಾಗಲಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೇಂದ್ರ ಹಾಗೂ ರಾಜ್ಯ ಸರಕಾರಗಳು ವಿಕಲಚೇತನರಿಗೆ ಹಾಗೂ ಅಂಗವಿಕಲರಿಗೆ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ಜಗದ್ಗುರು ರಂಭಾಪುರಿ ವೀರಗಂಗಾಧರ ಸಮುದಾಯ ಭವನದ ಆವರಣದಲ್ಲಿ ರಾಜ್ಯ ಸರಕಾರ, ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಗದಗ ಇವರು ಕೊಡಮಾಡಿದ 17 ಯಂತ್ರಚಾಲಿತ ತ್ರಿಚಕ್ರವಾಹನ, 3 ಬ್ಯಾಟರಿ ಚಾಲಿತ ವೀಲ್ ಚೇರ್ ವಿತರಣೆ ಮಾಡಿ ಮಾತನಾಡಿದರು.

ಅಂಗವಿಕಲರು, ಹಿರಿಯರು ಸ್ವಾವಲಂಬಿಯಾಗಿ ಜೀವನ ನಡೆಸಬೇಕು ಎಂಬುದು ಯೋಜನೆ ಉದ್ದೇಶವಾಗಿದೆ. ಇವುಗಳನ್ನು ಬಳಸಿಕೊಂಡು ಉತ್ತಮ ಜೀವನ ನಿರ್ಮಾಣ ಮಾಡಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಮಹಾಂತೇಶ ಕುರಿ, ತಹಸೀಲ್ದಾರ ವಾಸುದೇವ ಸ್ವಾಮಿ, ಶಿರಹಟ್ಟಿ ತಹಸೀಲ್ದಾರ ಅನಿಲ್ ಬಡಿಗೇರ್, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ, ಎಮ್‌ಆರ್‌ಡಬ್ಲ್ಯೂ ಭಾರತಿ ಮೂರಶಿಳ್ಳಿ, ಯುಆರ್‌ಡಬ್ಲ್ಯೂ ಮಂಜುನಾಥ ರಾಮಗೇರಿ, ವನಜಾಕ್ಷಿ ಹಾಲಗಿಮಠ, ನಾಗಪ್ಪ ಅಣ್ಣಿಗೇರಿ, ನಾಮದೇವ ಲಮಾಣಿ ಸೇರಿದಂತೆ ಮೂರೂ ತಾಲೂಕಿನ ಗ್ರಾ.ಪಂ ವಿಆರ್‌ಡಬ್ಲ್ಯೂ ಅವರು ಇದ್ದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ


2024–25ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿಯ ಯುವಕ/ಯುವತಿಯರಿಗೆ ಜಿಮ್ ಫಿಟ್ನೆಸ್, ಬ್ಯೂಟೀಷಿಯನ್, ಹಾಗೂ ಚಾಟ್ಸ್ ತಯಾರಿಕೆ ತರಬೇತಿ ಶಿಬಿರವನ್ನು ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗುವುದು. ಜಿಮ್ಸ್ /ಫಿಟ್ನೆಸ್ ತರಬೇತಿಯನ್ನು ಸೆ 19 ರಿಂದ ಅಕ್ಟೋಬರ್ 3 ರವರೆಗೆ ಶ್ರೀ ಕಂಠೀರವ ಕ್ರಿಡಾಂಗಣ , ಕಸ್ತೂರಬಾ ರಸ್ತೆ ಬೆಂಗಳೂರು ಇಲ್ಲಿ ಜರುಗಲಿದೆ. ಬ್ಯೂಟಿಷಿಯನ್ ತರಬೇತಿ ಶಿಬಿರವನ್ನು ಸೆಪ್ಟೆಂಬರ್ 21 ರಿಂದ ಅಕ್ಟೋಬರ್ 3 ರವರೆಗೆ ಹಾಗು ಚಾಟ್ಸ್ ತಯಾರಿಕೆ ತರಬೇತಿಯನ್ನು ಅಕ್ಟೊಬರ್ 4 ರಿಂದ 9 ರವರೆಗೆ ಕೋರಮಂಗಲ ಒಳಾಂಗಣ ಕ್ರೀಡಾಂಗಣ ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗುವುದು.

ಶಿಬಿರದಲ್ಲಿ ಭಾಗವಹಿಸುವ ಶಿಬಿರಾರ್ಥಿಗಳಿಗೆ ಊಟೋಪಹಾರ, ಪ್ರಮಾಣ ಪತ್ರ ಹಾಗೂ ಹೊರ ಜಿಲ್ಲೆಗಳಿಂದ ಭಾಗವಹಿಸುವ ಯುವತಿಯರಿಗೆ ಸಾಮಾನ್ಯ ವಸತಿ ವ್ಯವಸ್ಥೆಯನ್ನು ನೀಡಲಾಗುವುದು. ಆಸಕ್ತ ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಗಳನ್ನು ಪಡೆದು ಪ್ರಸ್ತಾವನೆಯನ್ನು ಸೆಪ್ಟೆಂಬರ್ 15 ರೊಳಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರನ ಹಾಗೂ ಕ್ರೀಡಾ ಇಲಾಖೆ ಈ ಕಚೇರಿಗೆ ಕಳುಹಿಸಿಕೊಡಲು ಕೋರಲಾಗಿದೆ.

ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 08372– 238345 ರ ಮೂಲಕ ಸಂಪರ್ಕಿಸಲು ಕೋರಲಾಗಿದೆ.

## ನಿಧನ ವಾರ್ತೆ

### ತಾರಾಬಾಯಿ ವೆರ್ಣೇಕರ



ಲಕ್ಷ್ಮೇಶ್ವರ: ಪಟ್ಟಣದ ದೈವಜ್ಞ ಸಮಾಜದ ಹಿರಿಯರಾದ ತಾರಾಬಾಯಿ ದತ್ತದಿಗಂಬರ ವೆರ್ಣೇಕರ (75) ಇವರು ಬುಧವಾರ ನಿಧನರಾದರು. ಮೃತರಿಗೆ ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ–ಬಂಧು ಬಳಗವಿದೆ.

### ಮಲ್ಲೇಶಪ್ಪ ಕುಂಬಾರ



ಲಕ್ಷ್ಮೇಶ್ವರ: ಪಟ್ಟಣದ ಕುಂಬಾರ ಓಣಿಯ ಹಿರಿಯ ನಿವಾಸಿ ಮಲ್ಲೇಶಪ್ಪ ಉಳವೆಪ್ಪ ಕುಂಬಾರ (89) ಶುಕ್ರವಾರ ಸಂಜೆ ನಿಧನರಾದರು. ಮೃತರಿಗೆ ಪತ್ನಿ, ಮೂವರು ಪುತ್ರರು, ಇಬ್ಬರು ಪುತ್ರಿಯರಿದ್ದಾರೆ.

## ಎಂ.ಕೆ. ಲಮಾಣಿಗೆ ಕೆಪಿಸಿಸಿ 'ಶ್ರೇಷ್ಠ ಶಿಕ್ಷಕ' ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಲ್ಲಿನ ಎಫ್.ಎಂ. ಡಬಾಲಿ ಪದವಿಪೂರ್ವ ಕಾಲೇಜಿನ ದೈಹಿಕ ಶಿಕ್ಷಣ ಉಪನ್ಯಾಸಕ ಎಂ.ಕೆ. ಲಮಾಣಿಯವರ ಸೇವೆಯನ್ನು ಗುರುತಿಸಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಶಿಕ್ಷಕರ ಘಟಕದ ರಾಜ್ಯಾಧ್ಯಕ್ಷ ಬಸವರಾಜ ಗುರಿಕಾರ ರಾಜ್ಯಮಟ್ಟದ 'ಶ್ರೇಷ್ಠ ಶಿಕ್ಷಕ' ಪ್ರಶಸ್ತಿಗೆ ಆಯ್ಕೆ ಮಾಡಿದ್ದರು. ಅದರಂತೆ ಗುರುವಾರ ಬೆಂಗಳೂರಿನ ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ಶಿಕ್ಷಕರ ದಿನಾಚರಣೆಯ ಕಾರ್ಯಕ್ರಮದಲ್ಲಿ ಎಂ.ಕೆ. ಲಮಾಣಿ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.



ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಪ್ರಶಸ್ತಿ ಪುರಸ್ಕೃತ ಶಿಕ್ಷಕ ಎಂ.ಕೆ. ಲಮಾಣಿ, ಕೆಪಿಸಿಸಿ ಶಿಕ್ಷಕರ ರಾಜ್ಯ ಘಟಕವು ನನ್ನ ಸೇವೆಯನ್ನು ಗುರುತಿಸಿ ರಾಜ್ಯಮಟ್ಟದ ಪ್ರಶಸ್ತಿ ನೀಡಿರುವುದು ನನ್ನ ಸೇವಾ ಅವಧಿಯಲ್ಲಿ ತೃಪ್ತಿ ತಂದಿದ್ದು, ಈ ಹಿಂದೆ ತಾಲೂಕಾ ಕಸಾಪ ಅಧ್ಯಕ್ಷರಾಗಿ ನಾಡು–ನುಡಿಯ ರಕ್ಷಣೆಗೆ ಹಲವು ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗಿದೆ. ಜೊತೆಗೆ ಮಾಧ್ಯಮಿಕ ಶಾಲಾ ಶಿಕ್ಷಕರ ಸಮಸ್ಯೆಗಳಿಗೆ ಸದಾ ಸ್ಪಂದಿಸುತ್ತಾ ಬರಲಾಗುತ್ತಿದೆ ಎಂದರು.

## ಇನ್ನರ್ ವ್ಹೀಲ್‌ನಿಂದ ಮಹಿಳಾ ಸಾಕ್ಷರತಾ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ಸಾಕ್ಷರತೆ ಬಹಳ ಮುಖ್ಯ ಮತ್ತು ಸಮಾಜದ ಪ್ರಗತಿಗೆ ಪ್ರಮುಖ ಪಾತ್ರ ವಹಿಸುತ್ತದೆ. ಸಾಕ್ಷರತೆಯ ಮೂಲಕ, ಮಹಿಳೆಯರು ತಮ್ಮ ವ್ಯಕ್ತಿತ್ವವನ್ನು ಸುಧಾರಿಸಬಹುದು. ಸಾಕ್ಷರತೆ ಅವರ ಜೀವನದಲ್ಲಿ ಆರ್ಥಿಕ ಸ್ಥಿರತೆ, ಸಬಲೀಕರಣ, ಲಿಂಗ ಸಮಾನತೆ ಮತ್ತು ಸಮಾಜದ ಪ್ರಗತಿಗೆ ಕೊಡುಗೆ ನೀಡಬಹುದು. ಈ ನಿಟ್ಟಿನಲ್ಲಿ ಇನ್ನರ್ ವ್ಹೀಲ್ ಸಂಸ್ಥೆ ಹಾಗೂ ಗದಗ ತಾಲೂಕ ಪಂಚಾಯತ್ ಸಹಯೋಗದಲ್ಲಿ ಶಿಕ್ಷಕರಿಗಾಗಿ 'ಕ್ರಿಯಾತ್ಮಕ ಸಾಕ್ಷರತಾ ಕಾರ್ಯಕ್ರಮ'ದ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.




ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ಕವಿತಾ ಬೇಲೇರಿ ಕಾರ್ಯಕ್ರಮದಲ್ಲಿ ಮಹಿಳಾ ಸಾಕ್ಷರತೆಯ ಪ್ರಾಮುಖ್ಯತೆಯನ್ನು ತಿಳಿಸುತ್ತಾ ಮಹಿಳೆ ಸಾಕ್ಷರಳಾದರೆ ಶಾಲೆಯೊಂದು ತೆರದಂತೆ. ಮಹಿಳೆ ತನ್ನ ಸಾಮರ್ಥ್ಯವನ್ನು ಅರಿವುದರಲ್ಲಿ ಶಿಕ್ಷಣವು ಮೊದಲ ಹಂತವಾಗಿದೆ. ಪ್ರತಿಯೊಬ್ಬ ಮಹಿಳೆ ಸಾಕ್ಷರಳಾಗಿ ತನ್ನ ಹಕ್ಕು ಹಾಗೂ ಕರ್ತವ್ಯಗಳನ್ನು ಅರಿತು ಸಮಾಜದಲ್ಲಿ ಮುಂದೆ ಬರಬೇಕೆಂದು ತಿಳಿಸಿದರು.

ಇನ್ನೋರ್ವ ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ಪಿ.ಡಿ. ಮಂಗಳೂರು ಮಾತನಾಡುತ್ತಾ, ಮಹಿಳೆ ಸಹಜವಾಗಿ ತ್ಯಾಗ ಹಾಗೂ ನಾಯಕತ್ವ ಗುಣವನ್ನು ತನ್ನಲ್ಲಿ ಹೊಂದಿರುತ್ತಾಳೆ. ವಿದ್ಯೆ ಮಹಿಳೆಯಲ್ಲಿ ವಿಶ್ವಾಸವನ್ನು ಹೆಚ್ಚಿಸುತ್ತದೆಯೆಂದರು. ಸಂಸ್ಥೆಯ ಅಧ್ಯಕ್ಷರಾದ ನಾಗರತ್ನಾ ಮಾರನಬಸರಿ ಮಾತನಾಡಿ, ಸಾಕ್ಷರತೆಯು ಮಹಿಳೆಯ ಗುರಿಗಳ ಸಾಧನೆಗೆ, ತಮ್ಮ ಜ್ಞಾನ ಮತ್ತು ಸಾಮರ್ಥ್ಯ ಬೆಳವಣಿಗೆಗೆ ಹಾಗೂ ಅವರ ಸಮುದಾಯ ಮತ್ತು ವಿಶಾಲ ವ್ಯಾಪ್ತಿಯ ಸಮಾಜದಲ್ಲಿ ಪಾಲ್ಗೊಳ್ಳಲು ಅನುವು ಮಾಡುವ ಅವಿಚ್ಛಿನ್ನ ಭಾಗವಾಗಿದೆ ಎಂದರು.

ಅತಿಥಿಗಳಾಗಿ ಆಗಮಿಸಿದ ತಾ.ಪಂ ಸಹಾಯಕ ನಿರ್ದೇಶಕ ಕೆ.ಎಲ್. ಪ್ರಜಾರ್, ಜಿ.ಎಸ್. ಕಿಲಬಣ್ಣವರ ವೇದಿಕೆಯ ಮೇಲೆ ಉಪಸ್ಥಿತರಿದ್ದು ಸಂದರ್ಭೋಚಿವಾಗಿ ಮಾತನಾಡಿದರು. ಎಲ್ಲಾ ಸಂಪನ್ಮೂಲ ವ್ಯಕ್ತಿಗಳನ್ನು ಕ್ಲಬ್ ವತಿಯಿಂದ ಸನ್ಮಾನಿಸಲಾಯಿತು. ಈ ತರಬೇತಿ ಕಾರ್ಯಕ್ರಮದಿಂದ ಒಟ್ಟು 58 ತರಬೇತುದಾರರು ಪ್ರಯೋಜನ ಪಡೆದರು. ಸಿಎಲ್‌ಸಿಸಿ ಸುಮಾ ಪಾಟಿಲ, ಐಎಸ್‌ಓ ಪುಷ್ಪಾ ಭಂಡಾರಿ ಹಾಗೂ ಸಂಸ್ಥೆಯ ಕಾರ್ಯದರ್ಶಿಗಳಾದ ವೀಣಾ ತಿರ್ಲಾಪೂರ ಉಪಸ್ಥಿತರಿದ್ದರು.

ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘದ ಚುನಾವಣೆ

## ಶಿವಕಾಳಿಮಠ–ಗಾಣಿಗೇರ ಅವಿರೋಧ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಪ್ರತಿಷ್ಠಿತ ಸಹಕಾರಿ ಸಂಘಗಳಲ್ಲಿ ಒಂದಾಗಿರುವ ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘದ ನಿಯಮಿತದ ಆಡಳಿತ ಮಂಡಳಿಗೆ 2024–2029ರ ಅವಧಿಗೆ ಶುಕ್ರವಾರ ಸಂಘದ ಕಾರ್ಯಾಲಯದಲ್ಲಿ ನಡೆದ ಚುನಾವಣೆಯಲ್ಲಿ ಎಲ್ಲ ಸ್ಥಾನಗಳಿಗೆ ಅವಿರೋಧ ಆಯ್ಕೆ ಜರುಗಿತು.



ಅಧ್ಯಕ್ಷರಾಗಿ ವೀರಯ್ಯ ಶಿವಲಿಂಗಯ್ಯ ಶಿವಕಾಳಿಮಠ, ಉಪಾಧ್ಯಕ್ಷರಾಗಿ ಮಹೇಶ ಗಿರಿಯಪ್ಪ ಗಾಣಿಗೇರ, ನಿರ್ದೇಶಕರಾಗಿ ಪ್ರಶಾಂತ ದೇಸಾಯಿಮಠ, ಮುರಿಗೆಪ್ಪ ಲಿಂಗದಾಳ, ಗಿರಿಯಪ್ಪ ಗಾಣಿಗೇರ, ಕಳಕಪ್ಪ ನಾಗರಾಳ, ಸುರೇಶ ಸರ್ವಿ, ಶೋಭಾ ಶಿವಕಾಳಿಮಠ, ಕವಿತಾ ದೇಸಾಯಿಮಠ, ಗೀತಾ ಪಲ್ಲೇದ, ಸರೋಜಾ ಲಿಂಗದಾಳ ಎ ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ ಎಂದು ಚುನಾವಣಾಧಿಕಾರಿಗಳು ಅಧಿಕೃತವಾಗಿ ಘೋಷಿಸಿ ಅವರಿಗೆ ಪ್ರಮಾಣಪತ್ರ ವಿತರಿಸಿ ಅಭಿನಂದಿಸಿದರು.

ಈ ನೂತನ ಆಡಳಿತ ಮಂಡಳಿಯಲ್ಲಿ ಕಳಕಪ್ಪ ತಿಪ್ಪಣ್ಣ ನಾಗರಾಳ ಅವರು ನೂತನ ನಿರ್ದೇಶಕರಾಗಿ ಆಯ್ಕೆಯಾಗಿದ್ದನ್ನು ಬಿಟ್ಟರೆ ಉಳಿದವರೆಲ್ಲರೂ ಅದೇ ಸ್ಥಾನದಲ್ಲಿ ಈ ಮೊದಲಿನ ಎರಡು ಅವಧಿಯಲ್ಲಿಯೂ ಸಹ ಅವಿರೋಧವಾಗಿ ಆಯ್ಕೆಯಾಗಿದ್ದರು.

ಚುನಾವಣಾ ರಿಟರ್ನಿಂಗ್ ಅಧಿಕಾರಿಯಾಗಿ ನರಗುಂದ ಸಹಕಾರಿ ಸಂಘಗಳ ಲೆಕ್ಕಪರಿಶೋಧನೆ ಸಹಾಯಕ ನಿರ್ದೇಶಕರಾದ ಶ್ರೀನಿವಾಸ ನಾಗೇಂದ್ರ ಅವರು ಚುನಾವಣೆಯ ಎಲ್ಲ ಪ್ರಕ್ರಿಯೆಗಳನ್ನು ಜರುಗಿಸಿದರು.

ಶಿರಹಟ್ಟಿಯ ಸಹಕಾರ ಸಂಘಗಳ ಲೆಕ್ಕಪರಿಶೋಧನೆಯ ಹಿರಿಯ ಲೆಕ್ಕಪರಿಶೋಧಕರಾದ ಎಂ.ವ್ಹಿ.ಚುರ್ಚಿಹಾಳ ಮತ್ತು ರೋಣದ ಸಹಕಾರ ಸಂಘಗಳ ಅಭಿವೃದ್ಧಿ ಅಧಿಕಾರಿ ಪ್ರಶಾಂತ ಮುಧೋಳ ಅವರು ಚುನಾವಣಾ ಸಹಾಯಕ ಅಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು.

ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಗೊಂಡವರು ಸಹಕಾರಿ ತತ್ವದಡಿ ಸಂಸ್ಥೆಯನ್ನು ಚೆನ್ನಾಗಿ ಮುನ್ನಡೆಸಲಿ. ಸಂಸ್ಥೆಗೆ ಒಳ್ಳೆಯ ಹೆಸರಿದೆ, ಉತ್ತಮ ಆಡಳಿತಕ್ಕೆ ಈಗಾಗಲೇ ಪ್ರಶಸ್ತಿ ಪಡೆದುಕೊಂಡಿದ್ದು, ಬರಲಿರುವ ದಿನಮಾನಗಳಲ್ಲಿ ರಾಜ್ಯದಲ್ಲಿಯೇ ಅತ್ಯುತ್ತಮ ಸಂಸ್ಥೆಯಾಗಿ ಹೊರಹೊಮ್ಮಲಿ ಎಂದು ಚುನಾವಣಾಧಿಕಾರಿಗಳು ಶುಭ ಹಾರೈಸಿದರು.

ಸಹಕಾರಿ ಸಂಘದ ಸಂಸ್ಥಾಪಕ ಜಿ.ಎಂ. ಪಲ್ಲೇದ ಅವರು ಸಂಸ್ಥೆ ನಡೆದು ಬಂದ ದಾರಿ ವಿವರಿಸಿ, ಆಡಳಿತ ಹಾಗೂ ಸಿಬ್ಬಂದಿ ವರ್ಗದ ಪರಿಶ್ರಮ ಮತ್ತು ಜನರು ಸಂಸ್ಥೆಯ ಮೇಲಿಟ್ಟಿರುವ ವಿಶ್ವಾಸದಿಂದಾಗಿ ಸಂಸ್ಥೆ ಪ್ರಗತಿಪಥದಲ್ಲಿ ಮುನ್ನಡೆದಿದೆ ಎಂದರು.

ಅವಿರೋಧ'ವಾಗಿ ಆಯ್ಕೆಗೊಂಡ ನೂತನ ಅಧ್ಯಕ್ಷ ವ್ಹಿ.ಎಸ್. ಶಿವಕಾಳಿಮಠ ಹಾಗೂ ಉಪಾಧ್ಯಕ್ಷ ಎಂ.ಜಿ. ಗಾಣಿಗೇರ ಅವರು ಎಲ್ಲ ನಿರ್ದೇಶಕರ ವಿಶ್ವಾಸದೊಂದಿಗೆ, ಸಿಬ್ಬಂದಿಯ ನಿಷ್ಠೆಯ ಕರ್ತವ್ಯ ನಿರ್ವಹಣೆಯೊಂದಿಗೆ ಸಂಸ್ಥೆಯನ್ನು ಇನ್ನೂ ಅಭಿವೃದ್ಧಿಯತ್ತ ಸಾಗಿಸುವ ಭರವಸೆ ನೀಡಿ ಜನತೆಯ ವಿಶ್ವಾಸ ಸಹಕಾರವನ್ನು ಕೋರಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಎಸ್.ಎಂ. ಸರ್ವಿ, ವ್ಯವಸ್ಥಾಪಕ ಬಿ.ಎಂ. ಹಳ್ಳಿಕೇರಿ ಸೇರಿದಂತೆ ಸಂಸ್ಥೆಯ ಎಲ್ಲ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಪೋಷಣ ಮಾಸಾಚರಣೆ ಕಾರ್ಯಕ್ರಮದಲ್ಲಿ ಸಿ.ಎಸ್. ಶಿವನಗೌಡರ

## ಗರ್ಭಿಣಿಯರು ಆರೋಗ್ಯ ಕಾಳಜಿ ವಹಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ ಹಾಗೂ ಶಿಶು ಅಭಿವೃದ್ಧಿ ಯೋಜನೆ ಗದಗ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ಇಲ್ಲಿನ ವೀರಭದ್ರೇಶ್ವರ ದೇವಸ್ಥಾನದ ಸಭಾಭವನದಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪೋಷಣ ಮಾಸಾಚರಣೆ ಕಾರ್ಯಕ್ರಮದಲ್ಲಿ ಸೂಚಿಸಿದಂತೆ ಪೌಷ್ಠಿಕ ಆಹಾರವನ್ನು ಮಕ್ಕಳು, ಗರ್ಭಿಣಿಯರು, ಬಾಣಂತಿಯರು ಸರಿಯಾಗಿ ಸೇವಿಸಬೇಕು ಎಂದು ತಿಳಿಸಿ, ಅದರ ಮಹತ್ವದ ಬಗ್ಗೆ ವಿವರವಾಗಿ ಮಾತನಾಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಪದ್ಮಾವತಿ ಜಿ ಮಾತನಾಡಿ, ಸೆಪ್ಟೆಂಬರ್ ಮಾಹೆಯಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಏಕ್ ಪೇಡ್ ಮಾಕೆ ನಾಮ್ (ತಾಯಿಯ ಹೆಸರಿನಲ್ಲಿ ಒಂದು ಗಿಡ) ನೆಡುವುದರ ಮೂಲಕ ಎಲ್ಲ ಅಂಗನವಾಡಿ ಕೇಂದ್ರಗಳಲ್ಲಿ ಉದ್ಘಾಟನೆ ಮಾಡಲಾಗಿದೆ. ಎಲ್ಲರೂ ತಮ್ಮ ತಮ್ಮ ಮನೆಗಳಲ್ಲಿ ಪೌಷ್ಠಿಕ ಕೈತೋಟಗಳನ್ನು ನಿರ್ಮಿಸಿ ಪೌಷ್ಠಿಕ ಆಹಾರವನ್ನು ಸೇವಿಸಬೇಕು. ಇದರಿಂದ ನಮ್ಮ ಆರೋಗ್ಯವನ್ನು ಉತ್ತಮವಾಗಿರಿಸಿಕೊಳ್ಳಬಹುದು ಎಂದು ಹೇಳಿದರು.

ಜಿಲ್ಲಾ ನಿರೂಪಣಾಧಿಕಾರಿ ರಾಧಾ ಜಿ.ಮಣ್ಣೂರ ಮಾತನಾಡಿ, ಮಕ್ಕಳ ಪೌಷ್ಠಿಕತೆ, ಗರ್ಭಿಣಿ–ಬಾಣಂತಿಯರಲ್ಲಿನ ರಕ್ತಹೀನತೆ ಹಾಗೂ ಇಲಾಖೆಯ ವಿವಿಧ ಯೋಜನೆಯ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಪೋಷಣ ಜಿಲ್ಲಾ ಸಂಯೋಜಕಿ ಸಂಗೀತಾ ಹೂಗಾರ ಮಕ್ಕಳ ಬೆಳವಣಿಗೆ, ಮೇಲ್ವಿಚಾರಣೆ ಕುರಿತು ಮಾಹಿತಿ ನೀಡಿದರು. ಪವನ ಕಾಟೀಗರ ಉಪಸ್ಥಿತರಿದ್ದರು. ಸಭೆಯಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎಚ್.ಎಸ್ ಜೋಗೇರ, ಮಂಜುಳಾ ಹಬೀಬ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಗರ್ಭಿಣಿಯರು, ತಾಯಂದಿರು, ಮಕ್ಕಳು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಭಾಗವಹಿಸಿದ್ದರು.

ಮಂಜುಳಾ ಹಬೀಬ ವಲಯ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಮಂಜುಳಾ ಕಮತ್ ವಂದಿಸಿದರು.

ಮಾತೃವಂದನಾ ಸಂಯೋಜಕ ಎಸ್.ಜಿ. ಪೂಜಾರ ಮಾತನಾಡಿ, 1ನೇ ಗರ್ಭಿಣಿ ಹಾಗೂ ಎರಡನೇ ಮಗು ಹೆಣ್ಣುಮಗು ಹೊಂದಿರುವ ಬಾಣಂತಿಯರಿಗೆ ಕ್ರಮವಾಗಿ 5 ಸಾವಿರ ಮತ್ತು 6 ಸಾವಿರ ರೂಗಳ ಧನಸಹಾಯವನ್ನು ನೇರ ನಗದು ವರ್ಗಾವಣೆ ಮೂಲಕ ಆರ್ಥಿಕ ಸಹಾಯ ಇಲಾಖೆಯಿಂದ ಪಡೆದುಕೊಳ್ಳಬಹುದೆಂದು ಹೇಳಿದರು.

5ನೇ ಗ್ರುಪ್ ಮಟ್ಟದ ಕ್ರೀಡಾಕೂಟ

## ತೋಂಟದಾರ್ಯ ಶಾಲಾ ವಿದ್ಯಾರ್ಥಿಗಳ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ನಗರದ ಲಯನ್ಸ್ ಶಾಲೆಯಲ್ಲಿ ಜರುಗಿದ 5ನೇ ಗ್ರುಪ್ ಮಟ್ಟದ ಕ್ರೀಡಾಕೂಟದಲ್ಲಿ ತೋಂಟದಾರ್ಯ ಶಿಕ್ಷಣ ಸಂಸ್ಥೆಯ ತೋಂಟ–ದಾರ್ಯ ಕನ್ನಡ ಹಾಗೂ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಸಾಧನೆ ಮಾಡಿದ್ದಾರೆ.

ವಯಕ್ತಿಕ ಆಟಗಳಗಳಾದ 400 ಮೀ ಹಾಗೂ 600 ಮೀ ಓಟದ ಸ್ಪರ್ಧೆಯಲ್ಲಿ ಖುಷಿ ಕಬಾಡಿ ಪ್ರಥಮ, 100 ಮೀ ಓಟದಲ್ಲಿ ಮನೋಜ ಬಾಬನಿ ತೃತೀಯ, 80 ಮೀ ಅಡೆತಡೆ ಓಟದಲ್ಲಿ ಮಹಮ್ಮದ ಯಾಸೀನ್ ತೃತೀಯ ಸ್ಥಾನ ಗಳಿಸಿದ್ದಾರೆ. ಬಾಲಕಿಯರ ವಿಭಾಗದ ಚಕ್ರ ಎಸೆತದಲ್ಲಿ ಇಂದುಶ್ರೀ ದುಂಡಸಿ ಪ್ರಥಮ, ಚೈತ್ರಾ ಬಳ್ಳಾರಿ ದ್ವಿತೀಯ, ಬಾಲಕರ ವಿಭಾಗದ ಚಕ್ರ ಎಸೆತದಲ್ಲಿ ಆಯುಷಕುಮಾರ ಕುಂದಾಪೂರ ಪ್ರಥಮ, ಪವನಕಲ್ಯಾಣ ನಾಗನೂರ ದ್ವಿತೀಯ ಸ್ಥಾನ ಗಳಿಸಿದ್ದಾರೆ.

ಗುಂಡು ಎಸೆತದಲ್ಲಿ ರುಕ್ಮಿಣಿ ನಾಗನೂರ ದ್ವಿತೀಯ, ಉದ್ದ ಜಿಗಿತದಲ್ಲಿ ಫೈಜಾನ್ ನಿಟ್ಟಾಲಿ ಪ್ರಥಮ, ಸ್ನೇಹಾ ಗುತ್ತಮ್ಮನವರ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಎತ್ತರ ಜಿಗಿತದಲ್ಲಿ ಖುಷಿ ಕಬಾಡಿ, ಶ್ರೀಲೇಖಾ ತಮರಳ್ಳಿ ದ್ವಿತೀಯ, ಮಹಮ್ಮದ್ ಫೈಜಾನ್ ದ್ವಿತೀಯ, ಯಾಸಿನ್ ಬಳ್ಳಾರಿ ತೃತೀಯ ಸ್ಥಾನ ಗಳಿಸಿದ್ದಾರೆ.

ಗುಂಪು ಆಟಗಳ ವಿಭಾಗದಲ್ಲಿ ಮಹಮ್ಮದ್ ಫೈಜಾನ್ ಹಾಗೂ ತಂಡ ಬಾಲಕರ ರೀಲೆ ಸ್ಪರ್ಧೆಯಲ್ಲಿ ದ್ವಿತೀಯ, ಸಹನಾ ಬೆಂಗಳೂರು ತಂಡ ಬಾಲಕಿಯರ ರೀಲೆ ಸ್ಪರ್ಧೆಯಲ್ಲಿ ದ್ವಿತೀಯ, ಇಂದುಶ್ರೀ ದುಂಡಸಿ ಬಾಲಕಿಯರ ಥ್ರೋಬಾಲ್‌ನಲ್ಲಿ ಪ್ರಥಮ, ನವೀನ್ ತಂಡ ಬಾಲಕರ ಥ್ರೋಬಾಲ್ ಸ್ಪರ್ಧೆಯಲ್ಲಿ ಪ್ರಥಮ, ವಾಲಿಬಾಲ್ ಸ್ಪರ್ಧೆಯಲ್ಲಿ ಮನೋಜ ಕುಮಾರ ಪತ್ತಾರ ತಂಡ ಪ್ರಥಮ ಸ್ಥಾನ ಗಳಿಸಿದ್ದಾರೆ.

ಪ್ರಶಸ್ತಿ ಗಳಿಸಿದ ಶಾಲೆಯ ಎಲ್ಲಾ ವಿದ್ಯಾರ್ಥಿಗಳಿಗೆ ತೋಂಟ–ದಾರ್ಯ ಶಿಕ್ಷಣ ಸಂಸ್ಥೆಯ ಚೇರಮನ್ ಎಸ್.ಎಸ್. ಪಟ್ಟಣಶೆಟ್ಟರ, ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ, ಪ್ರಾಥಮಿಕ ಶಾಲಾ ವಿಭಾಗದ ಮುಖ್ಯೋಪಾಧ್ಯಾಯ ಎನ್.ವ್ಹಿ. ಗಾಳಿ, ದೈಹಿಕ ಶಿಕ್ಷಕರಾದ ಎಫ್.ಆರ್. ದೊಡ್ಡಣ್ಣವರ ಸೇರಿದಂತೆ ಶಿಕ್ಷಕ ವೃಂದದವರು ಅಭಿನಂದನೆ ಸಲ್ಲಿಸಿದ್ದಾರೆ.

ಗ್ರುಪ್ ಆಟಗಳಲ್ಲಿ 600, 400 ಮೀ ಓಟ ಹಾಗೂ ಎತ್ತರ ಜಿಗಿತದಲ್ಲಿ ಪ್ರಥಮ ಸ್ಥಾನ ಗಳಿಸಿ ಅಪ್ರತಿಮ ಸಾಧನೆ ತೋರಿದ ತೋಂಟದಾರ್ಯ ಶಾಲೆಯ 7ನೇ ತರಗತಿಯ ವಿದ್ಯಾರ್ಥಿನಿ ಖುಷಿ ಕಬಾಡಿ 'ಸಮಗ್ರ ವೀರಾಗ್ರಣಿ' ಪ್ರಶಸ್ತಿಯನ್ನು ತನ್ನ ಮುಡಿಗೇರಿಸಿಕೊಂಡರು.

**ಒಂದು ದಿನದ ವಿಶೇಷ ಸಹಕಾರ ತರಬೇತಿ ಶಿಬಿರದಲ್ಲಿ ಬಸವರಾಜ ಹೊಸಮನಿ**

# ಸಹಕಾರ ಸಂಘಗಳು ಕೃಷಿಕರ ಜೀವನಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ. ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಸಹಕಾರ ಇಲಾಖೆ, ಹಾಗೂ ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಟಿ.ಎ.ಪಿ.ಸಿ.ಎಂ.ಎಸ್.ಲಿ., ಮುಂಡರಗಿ ಹಾಗೂ ಮುಂಡರಗಿ ತಾಲೂಕಿನ ಎಲ್ಲಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಒಂದು ದಿನದ ವಿಶೇಷ ಸಹಕಾರ ತರಬೇತಿ ಶಿಬಿರವನ್ನು ಕೆ.ಸಿ.ಸಿ ಬ್ಯಾಂಕ್ ಸಭಾಭವನದಲ್ಲಿ ಶುಕ್ರವಾರ ಜರುಗಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಧಾರವಾಡ ಕೆ.ಸಿ.ಸಿ. ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಎಸ್.ಪಾಟೀಲ ಮಾತನಾಡಿ, ಪ್ಯಾಕ್ಸ್‌ಗಳನ್ನು ಬಹುಸೇವಾ ಕೇಂದ್ರಗಳಾಗಿ ರೂಪಿಸುವುದರ ಜೊತೆಗೆ ಗಣಕೀಕರಣ ವ್ಯವಸ್ಥೆ, ಸಾಮಾನ್ಯ ಸೇವಾ ಕೇಂದ್ರಗಳಲ್ಲಿಯ ಸೌಲಭ್ಯಗಳನ್ನು ಅಳವಡಿಸಿಕೊಂಡು ಸಹಕಾರಿಗಳಿಗೆ ಅನುವು ಮಾಡಿಕೊಡುವುದು ಅತೀ ಅವಶ್ಯ. ರಾಷ್ಟ್ರದ 8.5 ಲಕ್ಷ ಸಹಕಾರ ಸಂಸ್ಥೆಗಳ ಮಾಹಿತಿಗಳನ್ನು ಕ್ರೋಢೀಕರಿಸಿ ಮಾಹಿತಿ ಕಣಜವನ್ನಾಗಿ (ಡೇಟಾ ಬೇಸ್ ಸೆಂಟರ್) ಮಾಡಿರುವುದು, ರಾಷ್ಟ್ರೀಯ ಮಟ್ಟದಲ್ಲಿ ಸಾವಯವ ಸಹಕಾರ ಸಂಸ್ಥೆ, ರಫ್ತು ಸಹಕಾರ ಸಂಸ್ಥೆ ಮತ್ತು ಬಿತ್ತನೆ ಬೀಜ ಸಹಕಾರ ಸಂಸ್ಥೆಗಳನ್ನು ಹುಟ್ಟುಹಾಕಿರುವುದು ವಿಶೇಷವಾಗಿದೆ.



ಪ್ರಸ್ತುತ ಅವಧಿಯಲ್ಲಿರುವ ಕೆ.ಸಿ.ಸಿ. ಬ್ಯಾಂಕುಗಳ ಸಂಖ್ಯೆ 52 ಇದ್ದು, ಪ್ರತಿ 10 ಸಾವಿರ ಜನಸಂಖ್ಯೆಯುಳ್ಳ ಗ್ರಾಮಕ್ಕೆ 3 ಪ್ಯಾಕ್ಸ್ ಸಂಘಗಳ ನಡುವೆ ಒಂದರಂತೆ ಕೆ.ಸಿ.ಸಿ. ಬ್ಯಾಂಕಿನ ನೂತನ ಶಾಖೆಯನ್ನು ಪ್ರಾರಂಭಿಸುವ ಉದ್ದೇಶವನ್ನು ಮುಂದಿನ 5 ವರ್ಷಗಳ ಅವಧಿಯಲ್ಲಿ ಯೋಜನೆಯಲ್ಲಿ ಹಾಕಿಕೊಳ್ಳಲಾಗಿದೆ ಎಂದು ಹೇಳಿದರು.

ಬಸವರಾಜ ವಾಯ್. ಹೊಸಮನಿ ಮಾತನಾಡಿ, ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಕೃಷಿ ವಲಯ ತನ್ನದೇ ಆದ ಪಾತ್ರವನ್ನು ನಿರ್ವಹಿಸುತ್ತಿದೆ. ಇನ್ನು ಕೃಷಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಜೀವನಾಡಿಗಳಾಗಿವೆ. ಈ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಗ್ರಾಮೀಣ ಮಟ್ಟದಲ್ಲಿ ಸದಸ್ಯರಿಗೆ ಬ್ಯಾಂಕಿಂಗ್ ಸೇರಿದಂತೆ ಬಹುವಿಧ ಸೇವೆಯನ್ನು ನಿಡುವುದಲ್ಲದೇ, ಕೃಷಿ ಸಂಬಂಧಿತ ಸಾಲಗಳನ್ನು ನೀಡುವುದರಲ್ಲಿ ಮಂಚೂಣಿಯಲ್ಲಿವೆ ಎಂದರು.

ಪಿಕಾರ್ಡ ಬ್ಯಾಂಕಿನ ಅಧ್ಯಕ್ಷ ಹಾಲಪ್ಪ ಆರ್. ಕಬ್ಬೇರಹಳ್ಳಿ ಅಧ್ಯಕ್ಷತೆ ವಹಿಸಿದ್ದರು. ಟಿ.ಎ.ಪಿ.ಸಿ.ಎಂ.ಎಸ್. ಅಧ್ಯಕ್ಷ ಎಂ.ಎಸ್. ಪಾಟೀಲ, ಯೂನಿಯನ್ ನಿರ್ದೇಶಕರಾದ ಶಿದ್ದನಗೌಡ ಬಿ.ಪಾಟೀಲ, ಯಂಕಪ್ಪ ಎಲ್. ಹುಳಕಣ್ಣವರ, ಎಸ್.ಎಂ. ಅಂಕದ ಉಪಸ್ಥಿತರಿದ್ದರು.

ಬರದೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಉಮೇಶಗೌಡ ಹಿರೇಗೌಡ್ರ ಮಾತನಾಡಿ, ಕೃಷಿ ಪತ್ತಿನ ಸಹಕಾರ ಸಂಘಗಳು ಕ್ರಿಯಾಶೀಲ ಸೇವೆ ಸಲ್ಲಿಸುತ್ತಿವೆ. ಪ್ಯಾಕ್ಸಗಳಲ್ಲಿ 13 ಕೋಟಿಗೂ ಮೀರಿ ಸದಸ್ಯರಿದ್ದು, ಈ ಅಂಕಿ-ಅಂಶ ನಮಗೆ ಕೃಷಿ ಪತ್ತಿನ ಸಂಘಗಳ ಅಗತ್ಯತೆಯನ್ನು ವಿವರಿಸುತ್ತದೆ. 100ರಿಂದ 5000 ಸದಸ್ಯರುಗಳನ್ನು ಹೊಂದಿರುವ ಈ ಸಂಘಗಳು ತಾಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿದ್ದು, ಗ್ರಾಮೀಣ ರೈತಾಪಿ ಜನರ ಅವಿಭಾಜ್ಯ ಅಂಗವಾಗಿವೆ ಎಂದು ಹೇಳಿದರು.

ತರಬೇತಿ ಕಾರ್ಯಾಗಾರದಲ್ಲಿ ಕೆ.ಬಿ. ದೊಡ್ಡಮನಿ, ಎಸ್.ವ್ಹಿ. ಪಾಟೀಲ ಉಪನ್ಯಾಸ ನೀಡಿದರು.

ಮುಂಡರಗಿ ಕೆ.ಸಿ.ಸಿ. ಬ್ಯಾಂಕಿನ ಸಿಬ್ಬಂದಿ ಹೀನಾ ಅಳವುಂಡಿಪ್ರಾರ್ಥಿಸಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ಯೂನಿಯನ್‌ನ ಮಹಿಳಾ ಸಹಕಾರ ಶಿಕ್ಷಕಿ ರಶೀದಾಬಾನು ಸಿ.ಯಲಿಗಾರ ವಂದಿಸಿದರು.

**ಪ್ರತಿಭಾ ಕಾರಂಜಿ ನಿಮಿತ್ತ ಮುಖ್ಯೋಪಾಧ್ಯಾಯರ ಪೂರ್ವಭಾವಿ ಸಭೆ**

# ಪ್ರತಿಭೆಗಳ ಅನಾವರಣವೇ ಪ್ರತಿಭಾ ಕಾರಂಜಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ಉಲ್ಲಾಸಮಯವಾಗಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪ್ರತಿಭಾ ಕಾರಂಜಿಯನ್ನು ಯಶಸ್ವಿಗೊಳಿಸಲು ನಾವೆಲ್ಲರೂ ಶ್ರಮಿಸೋಣ. ಪ್ರತಿಭೆಗಳ ಅನಾವರಣವೇ ಪ್ರತಿಭಾ ಕಾರಂಜಿ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು.

ಅವರು ಗದಗ ಶಹರ ಸರಕಾರಿ ಶಾಲೆ ನಂ. 12ರಲ್ಲಿ ಕ್ಲಸ್ಟರ್ ನಂಬರ್ 5ರ ಪ್ರತಿಭಾ ಕಾರಂಜಿ ಕುರಿತು ಶಾಲಾ ಮುಖ್ಯೋಪಾಧ್ಯಾಯರ ಸಭೆಯಲ್ಲಿ ಮಾತನಾಡಿದರು.

ಎಲ್ಲ ಮಕ್ಕಳು ಒಂದೇ ಕಡೆ ಕೂಡಿ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸುವದರಿಂದ ಮಕ್ಕಳಿಗೆ ಅನುಕೂಲವಾಗುವಂತೆ ನಾವೆಲ್ಲರೂ ಕಾಳಜಿ ವಹಿಸೋಣ ಎಂದರು.

ಮುಖ್ಯೋಪಾಧ್ಯಾಯೆ ಎಫ್. ಜೆ. ದಲಬಂಜನ್ ಮಾತನಾಡಿ, ಶಾಲೆಗಳಲ್ಲಿ ಮಕ್ಕಳು ತಾವು ಪ್ರತಿಭಾ ಕಾರಂಜಿಯಲ್ಲಿ ಭಾಗವಹಿಸುತ್ತಿದ್ದೇವೆ ಎಂದು ಸಂಭ್ರಮದಿಂದ ಸಹಪಾಠಿಗಳೊಂದಿಗೆ ಬಂದು ಭಾಗವಹಿಸುತ್ತಾರೆ. ನಾವೆಲ್ಲರೂ ಅವರ ಖುಷಿಗೆ ಇನ್ನಷ್ಟು ಪ್ರೋತ್ಸಾಹ



ನೀಡೋಣ ಎಂದರು.

ಮುಖ್ಯೋಪಾಧ್ಯಾಯೆ ಎಂ.ಬಿ. ಬಾರಾಟಕ್ಕೆ ಮಾತನಾಡಿ, ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಅಭಿನಂದನಾ ಪತ್ರದೊಂದಿಗೆ ಪದಕಗಳನ್ನು ವಿತರಿಸುವ ಕುರಿತು ವಿವರಿಸಿದರು.

ಇನ್ನೋರ್ವ ಮುಖ್ಯೋಪಾಧ್ಯಾಯೆ ಟಿ.ಎಸ್. ಮಣ್ಣೂರ ಮಾತನಾಡಿ, ಬರುವ ಮಕ್ಕಳೆಲ್ಲರೂ ಸ್ಪರ್ಧೆಗಳಲ್ಲಿ ಭಾಗವಹಿಸಿ ಸಂತಸದಿಂದ ಮರಳಲು ಪೂರಕವಾದ ಎಲ್ಲ ತಯಾರಿಯನ್ನು ಮಾಡಿಕೊಳ್ಳೋಣ ಎಂದರು.

ವಿವಿಧ ಶಾಲೆಗಳ ಮುಖ್ಯೋಪಾಧ್ಯಾಯರುಗಳಾದ ಪ್ರಕಾಶ ದೊಡ್ಡಮನಿ, ಬಸವರಾಜ ಮೆಣಸಿನಕಾಯಿ, ಹಸೀನಾ ನರಗುಂದ, ಎಂ.ಎಸ್. ಸರ್ವಿ, ಸುಜಾತಾ ಡಿ.ಕೆ. ಮುಂತಾದವರು ಸಲಹೆ-ಸೂಚನೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯರಾದ ಎಚ್. ಆರ್. ಕೋಣಿಮನಿ ಮಾತನಾಡಿ, ಈ ಶಾಲೆಯಲ್ಲಿ ಯಾವುದೇ ಕಾರ್ಯಕ್ರಮ ನಡೆದರೂ ನಮ್ಮ ಶಾಲೆಯ ಶಿಕ್ಷಕ ಸಮುದಾಯವು ಯಾವ ಕೊರತೆ ಆಗದಂತೆ ಕಾರ್ಯಕ್ರಮ ನಿರ್ವಹಿಸುತ್ತಿದ್ದು, ಈ ಕಾರ್ಯಕ್ರಮವನ್ನೂ ಯಶಸ್ವಿಗೊಳಿಸುತ್ತೇವೆ ಎಂದರು.

ಕ್ಲಸ್ಟರ್ ನಂ. 5ರ ಸಿ.ಆರ್.ಪಿ ಎಸ್.ಸಿ.ಹಿರೇಮಠ ಮಾತನಾಡಿ, ಎಲ್ಲ ಮುಖ್ಯೋಪಾಧ್ಯಾಯರು ಆತ್ಮೀಯತೆಯಿಂದ ಉತ್ತಮ ಸಲಹೆ ಸೂಚನೆಗಳನ್ನು ನೀಡಿ ಕಾರ್ಯಕ್ರಮದ ಯಶಸ್ವಿಗೆ ಕೈಜೋಡಿಸುತ್ತಿರುವುದಕ್ಕೆ ಅಭಿನಂದಸಿದರು.

ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ, ನೂತನ ಸಿಆರ್‌ಪಿ ಎಸ್.ಸಿ. ಹಿರೇಮಠ, ಮುಖ್ಯೋಪಾಧ್ಯಾಯೆ ಪಿ.ಎಸ್. ಮಣ್ಣೂರರನ್ನು ಶಾಲೆಯ ವತಿಯಿಂದ ಸನ್ಮಾನಿಸಲಾಯಿತು.

ಐ.ಎಚ್. ಬಳಬಟ್ಟಿ ಸ್ವಾಗತಿಸಿದರು. ಸಿ.ಜಿ. ಹುಡೇದ ನಿರೂಪಿಸಿದರು. ಎಸ್.ವ್ಹಿ. ವಕ್ಕಳದ ವಂದಿಸಿದರು. ಎಸ್.ಬಿ. ಕಣಕಿ, ಮಂಜುನಾಥ ಹುಯಿಲಗೋಳ, ಜಗದೀಶ ಶೀಲವಂತರ, ಎಸ್.ಬಿ. ದೊಡ್ಡಮನಿ, ಎಸ್.ಟಿ. ಲಮಾಣಿ, ವ್ಹಿ.ಜಿ. ಪಾಟೀಲ, ಎ.ಎಂ. ಕೆಂಚರಡ್ಡಿಯವರ, ಕೆ.ಸಿ. ಬಾಗೇವಾಡಿ ಮುಂತಾದವರು ಉಪಸ್ಥಿತರಿದ್ದರು.

**ಮೂರು ದಶಕಗಳಿಂದ ಗಣಪತಿಗಳ ತಯಾರಿಕೆಯಲ್ಲಿ ಸಿದ್ಧ ಹಸ್ತರಾದ ನಾಗಪ್ಪ ಬಡಿಗೇರ**

# ನಾಗಪ್ಪನ ಗಣಪನಿಗೆ ಬಲು ಬೇಡಿಕೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇನ್ನೇನು ಗಣೇಶ ಎಲ್ಲರ ಮನೆಮನಗಳನ್ನು ಬೆಳಗಲಿದ್ದಾನೆ. ಗಣಪನಿಗೆ ಅಂತಿಮ ರೂಪ ಕೊಡುವ ಕೆಲಸ ಕೆಲವು ಕಡೆ ನಡೆದಿದ್ದರೆ, ಈಗಾಗಲೇ ಸಿದ್ಧವಾಗಿರುವ ಗಣಪತಿ ಮೂರ್ತಿಗಳು ಮಾರುಕಟ್ಟೆಗೆ ಲಗ್ಗೆ ಇಟ್ಟಿವೆ.

ಕಳೆದ ಮೂರು ದಶಕಗಳಿಂದ ಗಣಪತಿಗಳ ತಯಾರಿಕೆಯಲ್ಲಿ ಸಿದ್ಧ ಹಸ್ತರಾಗಿರುವವರು ಇಲ್ಲಿಗೆ ಸಮೀಪದ ಕೋಟುಮಚಗಿಯ ನಾಗಪ್ಪ ಬಡಿಗೇರ. ಅವರ ಕೈಚಳಕದಲ್ಲಿ ತಯಾರಾಗುವ ಗಣಪತಿಗಳಿಗೆ ಜಿಲ್ಲೆಯಾದ್ಯಂತ ಬಲು ಬೇಡಿಕೆ ಇದೆ.

ಗಣೇಶ ಚತುರ್ಥಿಗೂ ಮೂರು ನಾಲ್ಕು ತಿಂಗಳುಗಳ ಮೊದಲೇ ಇವರ ಗಣಪತಿ ತಯಾರಿ ಶುರುವಾಗುತ್ತದೆ. ಮಣ್ಣು ತರುವದರಿಂದ ಹಿಡಿದು, ಅದನ್ನು ಜರಡಿ ಹಿಡಿದು ಹದ ಮಾಡುವವರೆಗೂ ಅವರಿಗೆ ವಿಶ್ರಾಂತಿ ಎಂಬುದೇ ಇರುವುದಿಲ್ಲ. ಮನೆಯಲ್ಲಿ ನಾಗಪ್ಪ, ತಮ್ಮ ಮಲ್ಲಪ್ಪ ಮತ್ತು ಮಗ ಓಂಕಾರ ಅವರಲ್ಲದೆ ಮನೆಯ ಹೆಣ್ಣು ಮಕ್ಕಳೂ ಸಹ ಈ ಕಾರ್ಯಕ್ಕೆ ಕೈಜೋಡಿಸುತ್ತಾರೆ.



ಹುಬ್ಬಳ್ಳಿ ಹತ್ತಿರದ ಅಂಚಟಗೇರಿಯಿಂದ ಒಂದು ಲೋಡ್ ಮಣ್ಣನ್ನು ತರುವ ಇವರಿಗೆ ಪ್ರತಿ ವರ್ಷ ಮಣ್ಣಿನ ಬೆಲೆ ಮತ್ತು ಸಾರಿಗೆ ವೆಚ್ಚ ದುಬಾರಿಯಾಗುತ್ತಿರುವುದರಿಂದ ತಯಾರಿಕಾ ವೆಚ್ಚವೂ ಏರುತ್ತಿದೆ. ಬಣ್ಣಗಳೂ ಸಹ ಈಗ ಮೊದಲಿಗಿಂತ ತುಟ್ಟಿಯಾಗಿರುವದರಿಂದ ಗಣಪ್ಪನಿಗೆ ಬಣ್ಣ ಹಚ್ಚುವುದೂ ಕೂಡ ದುಬಾರಿ ಎನ್ನಿಸುತ್ತಿದೆ. ಆದರೂ ಕಳೆದ ಮೂರು ದಶಕಗಳಿಂದ ನಮ್ಮನ್ನು ನಂಬಿರುವ ಗ್ರಾಹಕರಿಗೆ ಯಾವುದೇ ತೊಂದರೆಯಾಗಬಾರದು ಎಂದು ನಾವು ಈ ಗಣಪನ ತಯಾರಿ ಕಾರ್ಯವನ್ನು ಮುಂದುವರೆಸಿದ್ದೇವೆ ಎನ್ನುತ್ತಾರೆ ನಾಗಪ್ಪ ಬಡಿಗೇರ.

ಒಂಬತ್ತು ಇಂಚಿನ ಎತ್ತರದ ಗಣಪ್ಪನಿಂದ ಹಿಡಿದು ನಾಲ್ಕು ಅಡಿ ಎತ್ತರದ ಗಣಪತಿಗಳನ್ನೂ ಇವರು ತಯಾರು ಮಾಡುತ್ತಾರೆ.

ಎಲ್ಲ ಮೂರ್ತಿಗಳೂ ಜೀವಕಳೆ ಮತ್ತು ದೈವಕಳೆಗಳಿಂದ ಸುಂದರವಾಗಿ ಕಂಗೊಳಿಸುವುದರಿಂದ ಗದಗ ಜಿಲ್ಲೆಯಲ್ಲದೆ ಪಕ್ಕದ ಕೊಪ್ಪಳ ಜಿಲ್ಲೆಯಲ್ಲಿಯೂ ಇವರ ಗಣಪತಿಗಳು ಪ್ರಸಿದ್ಧಿ ಪಡೆದಿವೆ.

ಈ ಮೂರು ದಶಕಗಳಲ್ಲಿ ನಾಗಪ್ಪ ತಯಾರಿಸಿದ್ದು ಮಣ್ಣಿನ ಗಣಪತಿಗಳನ್ನೆ. ಒಂದು ಕಾಲದಲ್ಲಿ ಬಹು ಬೇಡಿಕೆ ಹೊಂದಿದ್ದ ಪಿಒಪಿ ಗಣಪತಿಗಳತ್ತ ಒಂದಿಷ್ಟೂ ಗಮನ ಹರಿಸದ ನಾಗಪ್ಪ, ಅವುಗಳನ್ನೂ ಮೀರಿಸುವಂತೆ ಮಣ್ಣಿನಲ್ಲಿಯೇ ಗಣಪತಿಗಳನ್ನು ತಯಾರಿಸಿ ಎಲ್ಲರ ಮನ ಗೆದ್ದಿದ್ದಾರೆ.

ನಾಗಪ್ಪ ಬಡಿಗೇರ ಅವರ ಗಣಪತಿಗಳು ನರೇಗಲ್ಲ, ಕೋಡಿಕೊಪ್ಪ, ಕೋಚಲಾಪೂರ, ಹಾಲಕೆರೆ, ನಿಡಗುಂದಿ, ನಿಡಗುಂದಿಕೊಪ್ಪ, ಜಕ್ಕಲಿ, ರೋಣ ಮುಂತಾದ ಊರುಗಳಲ್ಲದೆ ಪಕ್ಕದ ಯಲಬುರ್ಗಾ ತಾಲೂಕಿನ ಬಿನ್ನಾಳ, ತೊಂಡಿಹಾಳ ಮುಂತಾದ ಕಡೆಗಳಲ್ಲಿಯೂ ಭಾರೀ ಬೇಡಿಕೆಯನ್ನು ಹೊಂದಿವೆ.



## ವಾರ್ಷಿಕ ಸಭೆ ಸೆ.9ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ-2ರ ವಾರ್ಷಿಕ ಸರ್ವ ಸಾಧಾರಣ ಸಭೆಯು ಸೆ.9ರಂದು ಮಧ್ಯಾಹ್ನ 3.30ಕ್ಕೆ ನಡೆಯಲಿದೆ.

ವಾರ್ಷಿಕ ಮಹಾಸಭೆಯ ನೋಟಿಸ್ ಓದಿ ದೃಢೀಕರಿಸುವುದು, ಹಿಂದಿನ ವರ್ಷದ ಠರಾವುಗಳನ್ನು ದೃಢೀಕರಿಸುವುದು, 2023-24ರ ವಾರ್ಷಿಕ ವರದಿಯನ್ನು ಪರಿಗಣಿಸುವುದು, 2023-24ನೇ ಸಾಲಿನ ಲೆಕ್ಕ ಪರಿಶೋಧನೆ ವರದಿ ಬಗ್ಗೆ, ನಿವ್ವಳ ಲಾಭ ವಿಂಗಡಣೆ, 2024-25ನೇ ಸಾಲಿನ ವಾರ್ಷಿಕ ಆಯ-ವ್ಯಯದ ಅಂದಾಜು ಪತ್ರಿಕೆಯ ಅನುಮೋದನೆ ಪಡೆಯುವುದು, ಅಧ್ಯಕ್ಷರ ಅಪ್ಪಣೆಯ ಮೇರೆಗೆ ಬಂದ ವಿಷಯವನ್ನು ಚರ್ಚಿಸಲಾಗುವುದು. ಇದೇ ಸಂದರ್ಭದಲ್ಲಿ 75 ವರ್ಷ ಮೇಲ್ಪಟ್ಟ ಸದಸ್ಯರನ್ನು ಸನ್ಮಾನಿಸಿ ಗೌರವಿಸಲಾಗುವುದು. ಸಂಘದ ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಂಗಾಧರ ಬೆಣಕಲ್ ತಿಳಿಸಿದ್ದಾರೆ.

# ಬೈಕ್ ಸವಾರರಿಗೆ ಬಿಸಿ ಮುಟ್ಟಿಸಿದ ಪೊಲೀಸರು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಮುಖ್ಯ ಬಜಾರ್ ಸೇರಿ ಸೋಮೇಶ್ವರ ಪಾದಗಟ್ಟಿ, ಪಾದಗಟ್ಟಿ, ಪುರಸಭೆ, ಶಿಗ್ಲಿ ವೃತ್ತದಲ್ಲಿ ಶುಕ್ರವಾರ ಸಂತೆಯ ದಿನ ಎಲ್ಲೆಂದರಲ್ಲಿ ಬೈಕ್ ನಿಲ್ಲಿಸಿದ, ನಿಯಮ ಉಲ್ಲಂಘಿಸಿದ ಬೈಕ್ ಸವಾರರಿಗೆ ಪೊಲೀಸರು ಬಿಸಿ ಮುಟ್ಟಿಸಿದರು.

ನಂಬರ್ ಪ್ಲೇಟ್ ಇಲ್ಲದ, ನಂಬರ್ ಪ್ಲೇಟ್ ತಿರುಚಿದ, ಲೈಸೆನ್ಸ್ ಇಲ್ಲದ, ತ್ರಿಬಲ್ ರೈಡಿಂಗ್, ಹೆಲ್ಮೆಟ್ ಧರಿಸದ ಹೀಗೆ ನಿಯಮ ಪಾಲಿಸದ ಬೈಕ್ ಸವಾರರಿಂದ ಸಾಕಷ್ಟು ತೊಂದರೆ ಆಗುವುದನ್ನು ಮನಗಂಡ ಸಿಪಿಐ ನಾಗರಾಜ ಮಾಡಳ್ಳಿ ನೇತೃತ್ವದಲ್ಲಿ ಪಿಎಸ್‌ಐ ಈರಪ್ಪ ರಿತ್ತಿ ಪೊಲೀಸ್ ತಂಡ ಮತ್ತು ಹೋಂಗಾರ್ಡ್‌ಗಳ ಸಹಕಾರದೊಂದೊಂದಿಗೆ ಕಾರ್ಯಾಚರಣೆ ಕೈಗೊಂಡು ನೂರಕ್ಕೂ ಹೆಚ್ಚು ಬೈಕ್ ವಶಕ್ಕೆ



ಪಡೆದು ದಂಡ ವಿಧಿಸಿ ಬಿಸಿ ಮುಟ್ಟಿಸಿದರು.

ಈ ವೇಳೆ ಮಾತನಾಡಿದ ಪಿಎಸ್‌ಐ ಈರಪ್ಪ ರಿತ್ತಿ, ಪಟ್ಟಣದಲ್ಲಿ ಟ್ರಾಫಿಕ್ ಸಮಸ್ಯೆ ನಿಯಂತ್ರಣಕ್ಕೆ ಥರ್ಡ್ ಐ ಸಿಸಿ ಕ್ಯಾಮರಾ, ಆಯಕಟ್ಟಿನ ಸ್ಥಳದಲ್ಲಿ ಪೊಲೀಸ್ ನಿಯೋಜನೆ ಮಾಡಿದರೂ ಬೈಕ್/ವಾಹನ ಸವಾರರು ನಿಯಮ ಪಾಲಿಸುತ್ತಿಲ್ಲ. ಸಿಸಿ ಕ್ಯಾಮರಾದಿಂದ ತಪ್ಪಿಸಿಕೊಳ್ಳಲು ನಂಬರ್ ಪ್ಲೇಟ್ ತಿರುಚುವುದು, ತಿದ್ದುವುದು, ನಂಬರ್ ಪ್ಲೇಟ್ ತೆಗೆಯುವುದು ಸೇರಿ ಅಡ್ಡ ಮಾರ್ಗ ಅನುಸರಿಸುತ್ತಿರುವುದು ಪೊಲೀಸರಿಗೆ ಗೊತ್ತಿಲ್ಲವೆಂದೇನಿಲ್ಲ. ಅದಕ್ಕಾಗಿ ಇನ್ನು ಮುಂದಿನ ದಿನಗಳಲ್ಲಿ ಪೊಲೀಸ್ ಇಲಾಖೆಯಿಂದ ಹದ್ದಿನ ಕಣ್ಣಿಟ್ಟು ಶಿಸ್ತು ಕ್ರಮ, ಹೆಚ್ಚಿನ ದಂಡ ವಿಧಿಸಲಾಗುವುದು. ಆದ್ದರಿಂದ ಎಲ್ಲರೂ ಸಂಚಾರಿ ನಿಯಮಗಳನ್ನು ಪಾಲಿಸಲೇಬೇಕು. ಗಣಪತಿ ಹಬ್ಬದ ಹಿನ್ನೆಲೆಯಲ್ಲಿ ಮುಖ್ಯ ಬಜಾರ್ ರಸ್ತೆಯಲ್ಲಿ ಸಂಚಾರ ದಟ್ಟಣೆ ನಿಯತ್ರಣಕ್ಕಾಗಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. ಬೈಕ್, ವಾಹನ ಸವಾರರು ಎಚ್ಚರಿಕೆ ವಹಿಸಬೇಕು ಮತ್ತು ಪೊಲೀಸರ ಕಾರ್ಯಕ್ಕೆ ಸಹಕರಿಸಬೇಕು ಎಂದರು.

ಕಾರ್ಯಾಚರಣೆಯಲ್ಲಿ ಎಎಸ್‌ಐ ಎಸ್.ಎಸ್. ಮಕಾಂದಾರ, ಪ್ರಕಾಶ ಮ್ಯಾಗೇರಿ, ಅಪ್ಪಣ್ಣ ರಾಠೋಡ, ರೇಣುಕಾರಾಧ್ಯ ಅಕ್ಕಿಗುಂದಮಠ, ಮಹಾಂತೇಶ ಐಗಾರ್, ಬಿ.ಜಿ. ದಾಸಪ್ಪನವರ ಸೇರಿ ಪೊಲೀಸ್ ಮತ್ತು ಹೋಮ್ ಗಾರ್ಡ್ ಸಿಬ್ಬಂದಿಗಳು ಇದ್ದರು.


**5 ಕೋಟಿ ರೂ.ವೆಚ್ಚದಲ್ಲಿ 13 ಅರಕ್ಷಿತ ಸ್ಮಾರಕಗಳ ಅಭಿವೃದ್ಧಿ ಕಾಮಗಾರಿಗಳ ಭೂಮಿ ಪೂಜೆ**

# ಶಿಲಾನ್ಯಾಸ ಸಮಾರಂಭ ಸೆ.8ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಮೈಸೂರು, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಗದಗ ಇವರುಗಳ ಸಹಯೋಗದಲ್ಲಿ 5 ಕೋಟಿ ರೂ ವೆಚ್ಚದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ 13 ಆರಕ್ಷಿತ ಸ್ಮಾರಕಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಕಾಮಗಾರಿಗಳ ಭೂಮಿ ಪೂಜೆ ಹಾಗೂ ಶಿಲಾನ್ಯಾಸ ಸಮಾರಂಭವನ್ನು ಸೆ.8ರಂದು ಬೆಳಿಗ್ಗೆ 9.30 ಗಂಟೆಗೆ ಲಕ್ಕುಂಡಿಯ ಶ್ರೀ ಹಾಲಗುಂಡಿ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.



ನರಗುಂದ ಶಾಸಕ ಸಿ.ಸಿ. ಪಾಟೀಲ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಸಂಸದರುಗಳಾದ ಪಿ.ಸಿ. ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ಶಿರಹಟ್ಟಿ ಶಾಸಕರಾದ ಡಾ. ಚಂದ್ರು ಲಮಾಣಿ, ಲಕ್ಕುಂಡಿ ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಎಸ್.ಪ್ರಜಾರ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಸಲ್ಮಾ ಫಾಹಿಮ್, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ ಚೌಧರಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾದಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಪ್ರಭಾರ) ಅಮರನಾಥ ರೆಡ್ಡಿ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರಾದ ದೇವರಾಜ ಎ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ರಾಜ್ಯ ಸಮಿತಿ ಸದಸ್ಯರುಗಳಾದ ಸಿ.ಜಿ. ಬೆಟಸೂರಮಠ, ಗೀತಾಂಜಲಿ ರಾವ್, ಸಿದ್ಧಲಿಂಗೇಶ್ವರ ಎಚ್.ಪಾಟೀಲ, ಅ.ಧ. ಕಟ್ಟಿಮನಿ ಆಗಮಿಸುವರು.

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಡಾ.ಶರಣು ಗೋಗೇರಿ, ಧಾರವಾಡ ಪುರಾತತ್ವ ಸಂರಕ್ಷಣಾ ಅಭಿಯಂತರರಾದ ಆರ್.ಬಿ. ಶ್ರೀಖಂಡೆ, ಧಾರವಾಡ ಪುರಾತತ್ವ ಸಂರಕ್ಷಣಾ ಸಹಾಯಕರಾದ ಚಂದ್ರಶೇಖರ ಮಸಳಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

**ಅಭಿವೃದ್ಧಿ ಕಾಮಗಾರಿಗಳ ವಿವರ**

ಶ್ರೀ ಹಾಲಗುಂಡಿ ಬಸವೇಶ್ವರ ದೇವಾಲಯ ಮತ್ತು ಮಜ್ಜನ ಬಾವಿ ಸಂರಕ್ಷಣೆ, ಶ್ರೀ ಈಶ್ವರ ದೇವಾಲಯ ಸಂರಕ್ಷಣೆ, ಶ್ರೀ ಕಲ್ಮಠ ದೇವಾಲಯ ಮತ್ತು ಕಲ್ಮಠ ಬಾವಿ ಸಂರಕ್ಷಣೆ, ಕಣ್ಣೂರ ಬಾವಿ ಸಂರಕ್ಷಣೆ, ಶ್ರೀ ಕೋಟೆ ವೀರಭದ್ರೇಶ್ವರ ದೇವಾಲಯ ಸಂರಕ್ಷಣೆ, ಶ್ರೀ ಲಕ್ಷ್ಮೀನಾರಾಯಣ ದೇವಾಲಯ ಸಂರಕ್ಷಣೆ, ಶ್ರೀ ಲೆಕ್ಕದ ವೀರಣ್ಣ ದೇವಾಲಯ ಸಂರಕ್ಷಣೆ, ಶ್ರೀ ಈಶ್ವರ ಗುಡಿ ಹತ್ತಿರದ ಮಾಳಿ ಬಾವಿ ಸಂರಕ್ಷಣೆ, ಮಲ್ಲಿಕಾರ್ಜುನ ದೇವಾಲಯ ಸಂರಕ್ಷಣೆ, ಶ್ರೀ ನೀಲಕಂಠೇಶ್ವರ ದೇವಾಲಯ ಸಂರಕ್ಷಣೆ, ಶ್ರೀ ಸಿದ್ದೇಶ್ವರ ದೇವಾಲಯ ಸಂರಕ್ಷಣೆ, ಶ್ರೀ ಸೋಮೇಶ್ವರ ದೇವಾಲಯ ಸಂರಕ್ಷಣೆ, ಮತ್ತು ಕಪ್ಪಲಿ ಬಾವಿ ಸಂರಕ್ಷಣೆ, ಶ್ರೀ ವಿರುಪಾಕ್ಷ ದೇವಾಲಯ ಸಂರಕ್ಷಣೆ.


**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.

ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ-/2024-25/672 ದಿನಾಂಕ:05-9-2024

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀ ಮಧುಸೂಧನ ದಾಮೋದರದಾಸ ಪುಣೇಕರ ಸಾ॥ ಗದಗ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1 | ಕಳಸಾಪೂರ | 13/*/7 | 02ಎಕರೆ-20ಗುಂಟೆ | ಕೃಷಿ ವಲಯ | ವಸತಿ |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ
ಗದಗ-ಬೆಟಗೇರಿ

ವಾ.ಸಾ.ಇ/ಗದಗ/197/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka